ಸಂಪುಟ 01 । ಸಂಚಿಕೆ 144 । ಗುರುವಾರ 16 ಏಪ್ರಿಲ್ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ವಿಶ್ವ ಧ್ವನಿ ದಿನ

ವಿಶ್ವ ಧ್ವನಿ ದಿನವು ಮಾನವ ಧ್ವನಿಯ ಅಪರಿಮಿತ ಮಿತಿಗಳನ್ನು ಗುರುತಿಸಲು ಮೀಸಲಾಗಿರುವ ಜಾಗತಿಕ ವಾರ್ಷಿಕ ಕಾರ್ಯಕ್ರಮವಾಗಿದೆ. ಜನರು, ವಿಜ್ಞಾನಿಗಳು ಮತ್ತು ಇತರ ಹಣಕಾಸು ಸಂಸ್ಥೆಗಳೊಂದಿಗೆ ಧ್ವನಿ ವಿದ್ಯಮಾನದ ಉತ್ಸಾಹವನ್ನು ಹಂಚಿಕೊಳ್ಳುವುದು ಇದರ ಉದ್ದೇಶವಾಗಿದೆ.

## ಸುಭಾಷಿತ

ಜ್ಞಾನದ ಏಕೈಕ ಉದ್ದೇಶ, ಮನಸ್ಸಿಗೆ ಶಕ್ತಿ ನೀಡುವುದು ಮತ್ತು ಮನಸ್ಸನ್ನು ಶಿಸ್ತಿಗೆ ಒಳಪಡಿಸುವುದು.

ಸ್ವಾಮಿ ವಿವೇಕಾನಂದ

# ಅಯೋಧ್ಯೆ ಶ್ರೀರಾಮನ ದರ್ಶನ ಪಡೆದ ಕರ್ನಾಟಕದ ಕಾಂಗ್ರೆಸ್ ಶಾಸಕರು

**ಬೆಂಗಳೂರು: ಪುನರ್ ರಚನೆಯಾಗಬೇಕೆಂದು ಹಠ ಹಿಡಿದಿದ್ದ ಹಿರಿಯ ಶಾಸಕರು ಇಂದು ಅಯೋಧ್ಯೆಗೆ ಭೇಟಿ ನೀಡಿದ್ದು ಶ್ರೀರಾಮನ ದರ್ಶನ ಪಡೆದಿದ್ದಾರೆ. ಹಿರಿಯ ಶಾಸಕ ಟಿ.ಬಿ.ಜಯಚಂದ್ರ, ಹಂಪನಗೌಡ ಬಾದರ್ಲಿ, ವೈ.ವಿ. ಪಾಟೀಲ್, ಜಿ.ಎಸ್.ಪಾಟೀಲ್, ಬಸವರಾಜ್ ಶಿವಣ್ಣನವರ್, ಬಿ. ಶಿವಣ್ಣ, ಡಿ.ಜಿ.ಶಾಂತನಗೌಡ, ಜಿ.ಟಿ.ಪಾಟೀಲ್, ಯಶ್ವಂತರಾಯಗೌಡ, ಕೆ.ಷಡಕ್ಷರಿ, ಅಶೋಕ್ ಪಟ್ಟಣ್, ರಾಘವೇಂದ್ರ ಹಿಟ್ನಾಳ್ ಸೇರಿದಂತೆ ಒಟ್ಟು 15 ಶಾಸಕರು ಅಯೋಧ್ಯೆಗೆ ಭೇಟಿ ನೀಡಿದ್ದಾರೆ.**

ಈ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿರುವ ಟಿ.ಬಿ.ಜಯಚಂದ್ರ ಅಯೋಧ್ಯೆಗೆ ಭೇಟಿ ನೀಡಬೇಕು. ಶ್ರೀರಾಮನ ದರ್ಶನ ಪಡೆಯಬೇಕು ಎಂಬುದು ತಮ ಜೀವಮಾನದ ಕನಸಾಗಿತ್ತು. ಅದು ಇಂದು ನನಸಾಗಿದೆ ಎಂದು ಹೇಳಿಕೊಂಡಿದ್ದಾರೆ. ಅಯೋಧ್ಯೆಗೂ-ಕರ್ನಾಟಕಕ್ಕೂ ಅವಿನಾಭಾವ ಸಂಬಂಧವಿದೆ. ಬಾಲರಾಮನ ಪ್ರತಿಮೆಯನ್ನು ವಿನ್ಯಾಸಗೊಳಿಸಿದ್ದು, ಕರ್ನಾಟಕದ ಶಿಲ್ಪಿ. ಯೋಗಿರಾಜ್. ರಾಮಾಯಣದಲ್ಲಿ ರಾಮನ ಭಂಟ ಆಂಜನೇಯ ಹುಟ್ಟಿದ್ದು ಕಿಷ್ಕಿಂಧೆಯಲ್ಲಿ. ಹೀಗಾಗಿ ಕರ್ನಾಟಕ ಮತ್ತು ಅಯೋಧ್ಯೆ ನಡುವೆ ಉತ್ತಮ ಸಂಬಂಧಗಳಿವೆ ಎಂದು ಹೇಳಿದರು.




ದೆಹಲಿಯಲ್ಲಿ ವಾಸ್ತವ್ಯ: 20ಕ್ಕೂ ಹೆಚ್ಚು ಶಾಸಕರು ಭಾನುವಾರದಿಂದಲೂ ದೆಹಲಿಯಲ್ಲೇ ಬೀಡು ಬಿಟ್ಟಿದ್ದು, ಹೈಕಮಾಂಡ್‌ನ ನಾಯಕರೆಲ್ಲಾ ವಿವಿಧ ಚುನಾವಣೆಗಳ ಕಾರ್ಯದೊತ್ತಡದಲ್ಲಿದ್ದಾರೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಕರ್ನಾಟಕದವರೇ ಆಗಿದ್ದರಿಂದಾಗಿ ಹಿರಿಯ ಶಾಸಕರ ನಿಯೋಗಕ್ಕೆ ಶನಿವಾರವೇ ಸಮಯ ಕೊಟ್ಟು ಭೇಟಿ ಮಾಡಿದ್ದರು. ಆದರೆ ಈವರೆಗೂ ರಾಹುಲ್‌ಗಾಂಧಿ, ಕೆ.ಸಿ.ವೇಣುಗೋಪಾಲ್, ರಣದೀಪ್‌ಸಿಂಗ್ ಸುರ್ಜೇವಾಲ ಶಾಸಕರ ನಿಯೋಗವನ್ನು ಭೇಟಿ ಮಾಡಿಲ್ಲ.

ಮಲ್ಲಿಕಾರ್ಜುನ್ ಖರ್ಗೆಯವರಿಂದ ಸಂಪುಟ ಪುನರ್ ರಚನೆ ಭರವಸೆ ದೊರೆತಿದೆ. ಇದು ಒಂದು ಹಂತದಲ್ಲಿ ಹಿರಿಯ ಶಾಸಕರಿಗೆ ಸಂತಸ ತಂದಿದ್ದರೆ, ಮತ್ತೊಂದು ರೀತಿಯಲ್ಲಿ ಯಾರಿಗೆ ಅವಕಾಶ ಸಿಗುತ್ತದೆ ಎಂಬ ಗೊಂದಲ ಹೆಚ್ಚಾಗಿದೆ. ಸಚಿವ ಸಂಪುಟದಲ್ಲಿ ಈಗಾಗಲೇ ಅವಕಾಶ ಪಡೆದವರನ್ನು ಬದಲಾವಣೆ ಮಾಡಿ, ಹೊಸಬರಿಗೆ ಮತ್ತು ಯುವ ಉತ್ಸಾಹಿಗಳಿಗೆ ಅವಕಾಶ ನೀಡಬೇಕೆಂಬುದು ಹಿರಿಯ ಶಾಸಕರ ಅಭಿಪ್ರಾಯಗಳಾಗಿವೆ. ಮಲ್ಲಿಕಾರ್ಜುನ್ ಖರ್ಗೆಯವರು ಸಂಪುಟ ಪುನರ್ ರಚನೆಯಾಗಲಿದೆ ಎಂದು ಹೇಳಿದ್ದಾರೆ. ಆದರೆ ರಾಹುಲ್‌ಗಾಂಧಿಯವರ ಕಡೆಯಿಂದ ಈವೆರಗೂ ಯಾವುದೇ ಸಂದೇಶ ತಲುಪಿಲ್ಲ. ಹೀಗಾಗಿ ಕೆ.ಸಿ.ವೇಣುಗೋಪಾಲ್ ಅವರನ್ನು ಭೇಟಿ ಮಾಡಿ, ರಾಹುಲ್‌ಗಾಂಧಿ ಅವರ ಅಭಿಪ್ರಾಯವನ್ನು ಪಡೆದುಕೊಳ್ಳಲು ಶಾಸಕರ ನಿಯೋಗ ಬಯಸಿದೆ. ಹೀಗಾಗಿ ದೆಹಲಿಯಲ್ಲೇ ಬೀಡುಬಿಟ್ಟು ವ-ರಿಷ್ಠರ ಭೇಟಿಗಾಗಿ ಕಾದು ಕುಳಿತಿದ್ದಾರೆ.

## ಡಾ. ಬಾಬಾ ಸಾಹೇಬ ಅಂಬೇಡ್ಕರ್ 135ನೇ ಜಯಂತಿ ಆಚರಣೆ


ನೈಜ್ಯ ದೆಸೆ ನ್ಯೂಸ್

**ಬಾಗಲಕೋಟೆ: ಜಿಲ್ಲೆಯ ಇಲಕಲ್ ತಾಲೂಕಿನ ಗುಡೂರು ಗ್ರಾಮದಲ್ಲಿರುವ (SC)ಗೃಹರಕ್ಷಕ ದಳ ಕಚೇರಿಯಲ್ಲಿ ಸಂವಿಧಾನ ಶಿಲ್ಪಿ ಡಾ. ಬಾಬಾ ಸಾಹೇಬ ಅಂಬೇಡ್ಕರ್ ಅವರ 135ನೇ ಜಯಂತಿಯನ್ನು ಮಂಗಳವಾರ ಭಕ್ತಿಪೂರ್ವಕವಾಗಿ ಆಚರಿಸಲಾಯಿತು.**



ಈ ಸಂದರ್ಭದಲ್ಲಿ ಗೃಹರಕ್ಷಕ ದಳದ ಸಿಬ್ಬಂದಿಗಳು ಡಾ. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಹೂವಿನ ಹಾರ ಹಾಕಿ ಪೂಜೆ ಸಲ್ಲಿಸಿ ಗೌರವ ಅರ್ಪಿಸಿದರು. ಕಾರ್ಯಕ್ರಮದಲ್ಲಿ ಗೃಹರಕ್ಷಕ ದಳದ ಅಧಿಕಾರಿಗಳಾದ ಎಸ್.ಆರ್. ತುಂಬರಮಟ್ಟಿ ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದು, ಮಹಾನಾಯಕರ ಆದರ್ಶಗಳನ್ನು ಸ್ಮರಿಸಿದರು. ವರದಿ :ಕಮಲೇಶ್ ಹಡಪದ

# ಅಂಡಮಾನ್ ಸಮುದ್ರದಲ್ಲಿ ದೋಣಿ ಮುಳುಗಿ 250 ಜನ ಕಣ್ಮರೆ



ನೈಜ್ಯ ದೆಸೆ ನ್ಯೂಸ್

**ಢಾಕಾ: ಮಲೇಷ್ಯಾಕ್ಕೆ ತೆರಳುತ್ತಿದ್ದಾಗ ಅಂಡಮಾನ್ ಸಮುದ್ರದಲ್ಲಿ ದೋಣಿ ಮುಳುಗಿ ರೋಹಿಂಗ್ಯಾ ನಿರಾಶ್ರಿತರು ಮತ್ತು ಬಾಂಗ್ಲಾದೇಶಿ ಪ್ರಜೆಗಳು ಸೇರಿದಂತೆ ಕನಿಷ್ಠ 250 ಜನರು ಕಾಣೆಯಾಗಿದ್ದಾರೆ ಎಂದು ವಿಶ್ವಸಂಸ್ಥೆಯ ನಿರಾಶ್ರಿತರು ಮತ್ತು ವಲಸೆ ಸಂಸ್ಥೆಗಳು ತಿಳಿಸಿವೆ.**

ದೋಣಿ ಮುಳುಗಿದಾಗ ಯಾವುದೇ ಹುಡುಕಾಟದ ಸ್ಥಿತಿ ಸ್ಪಷ್ಟವಾಗಿಲ್ಲ.ದಕ್ಷಿಣ ಬಾಂಗ್ಲಾದೇಶದ ಕಾಕ್?ಸ ಬಜಾರ್ ಜಿಲ್ಲೆಯ ಟೆಕ್ನಾಫ್‌ನಿಂದ ಟ್ರಾಲರ್ ಮಲೇಷ್ಯಾಕ್ಕೆ ಹೆಚ್ಚಿನ ಸಂಖ್ಯೆಯ ಪ್ರಯಾಣಿಕರನ್ನು ಹೊತ್ತುಕೊಂಡು ಹೊರಟಿದೆ ಎಂದು ವಿಶ್ವಸಂಸ್ಥೆಯ ನಿರಾಶ್ರಿತರ ಹೈ ಕಮಿಷನರ್ ಮತ್ತು ವಲಸೆಗಾಗಿ ಅಂತರರಾಷ್ಟ್ರೀಯ ಸಂಸ್ಥೆ ಜಂಟಿ ಹೇಳಿಕೆಯಲ್ಲಿ ತಿಳಿಸಿದೆ. ಜನದಟ್ಟಣೆ, ಬಲವಾದ ಗಾಳಿ ಮತ್ತು ಒರಟಾದ ಸಮುದ್ರಗಳು ಹಡಗು ನಿಯಂತ್ರಣ ಕಳೆದುಕೊಂಡು ಮುಳುಗಲು ಕಾರಣವಾಯಿತು ಎಂದು ಏಜೆನ್ಸಿಗಳು ತಿಳಿಸಿವೆ. ಮತ್ತು ಈ ಕಣ್ಮರೆ ರೋಹಿಂಗ್ಯಾ ಜನರ ದೀರ್ಘಕಾಲದ ಸ್ಥಳಾಂತರ ಮತ್ತು ಬಾಳಿಕೆ ಬರುವ ಪರಿಹಾರಗಳ ಅನುಪಸ್ಥಿತಿಯನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿವೆ.

ಮ್ಯಾನ್ಮಾರ್‌ನ ರಖೈನ್ ರಾಜ್ಯದಲ್ಲಿ ನಡೆಯುತ್ತಿರುವ ಹಿಂಸಾಚಾರವು ರೋಹಿಂಗ್ಯಾಗಳ ಮ್ಯಾನ್ಮಾರ್‌ಗೆ ಸುರಕ್ಷಿತ ಮರಳುವಿಕೆಯನ್ನು ಅನಿಶ್ಚಿತಗೊಳಿಸಿದೆ ಮತ್ತು ಸೀಮಿತ ಮಾನವೀಯ ನೆರವು, ನಿರಾಶ್ರಿತರ ಶಿಬಿರಗಳಲ್ಲಿ ಶಿಕ್ಷಣ ಮತ್ತು ಉದ್ಯೋಗಕ್ಕೆ ನಿರ್ಬಂಧಿತ ಪ್ರವೇಶ, ದುರ್ಬಲ ರೋಹಿಂಗ್ಯಾ ನಿರಾಶ್ರಿತರನ್ನು ಅಪಾಯಕಾರಿ ಸಮುದ್ರ ಪ್ರಯಾಣವನ್ನು ಆಯ್ಕೆ ಮಾಡಲು ಒತ್ತಾಯಿಸುವುದನ್ನು ಮುಂದುವರೆಸಿದೆ, ಇದು ಹೆಚ್ಚಾಗಿ ಹೆಚ್ಚಿನ ವೇತನ ಮತ್ತು ವಿದೇಶಗಳಲ್ಲಿ ಉತ್ತಮ ಅವಕಾಶಗಳ ಸುಳ್ಳು ಭರವಸೆಗಳನ್ನು ಆಧರಿಸಿದೆ ಎಂದು ಅವರು ಹೇಳಿದರು. ಮ್ಯಾನ್ಮಾರ್‌ನಿಂದ 1 ಮಿಲಿಯನ್‌ಗಿಂತಲೂ ಹೆಚ್ಚು ರೋಹಿಂಗ್ಯಾಗಳಿಗೆ ಆಶ್ರಯ ನೀಡಿರುವ ಬಾಂಗ್ಲಾದೇಶದಲ್ಲಿರುವ ರೋಹಿಂಗ್ಯಾ ನಿರಾಶ್ರಿತರಿಗೆ ಜೀವ ಉಳಿಸುವ ಸಹಾಯವನ್ನು ಖಚಿತಪಡಿಸಿಕೊಳ್ಳಲು ಹಣಕಾಸು ಮತ್ತು ಒಗ್ಗಟ್ಟನ್ನು ಬಲಪಡಿಸಲು ಮತ್ತು ಅಂತರರಾಷ್ಟ್ರೀಯ ಸಮುದಾಯವನ್ನು ಒತ್ತಾಯಿಸಿವೆ.

## ಅಲ್ಲಂ ಪ್ರಶಾಂತ್ ನೇತೃತ್ವದಲ್ಲಿ ಅಂಬೇಡ್ಕರ್ ಜಯಂತಿ ಆಚರಣೆ

ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ: ಬಳ್ಳಾರಿ ನಗರ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ, ಸಾಮಾಜಿಕ ಸುಧಾರಕ ಮತ್ತು ಭಾರತೀಯ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ 136 ನೇ ಜಯಂತಿಯನ್ನು ಬಳ್ಳಾರಿ ನಗರ ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ ಅಲ್ಲಂ ಪ್ರಶಾಂತ್ ರವರ ಅಧ್ಯಕ್ಷತೆಯಲ್ಲಿ ವಿಜೃಂಭಣೆಯಿಂದ ಆಚ-ರಿಸಲಾಯಿತು.**

ಹಾಗೂ ಡಾ.ಬಿ.ಆರ್. ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪುಷ್ಪಗಳನ್ನು ಹಾಕುವ ಮೂಲಕ ಗೌರವ ನಮನಗಳನ್ನು ಸಲ್ಲಿಸಲಾಯಿತು.

ಅಧ್ಯಕ್ಷರು ಮತ್ತು ಮುಖಂಡರುಗಳು ತಮ್ಮ ತಮ್ಮ ಭಾಷಣಗಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ರವರು ದೇಶಕ್ಕೆ ನೀಡಿದ ಕೊಡುಗೆಗಳನ್ನು ಸ್ಮರಿಸಿದರು.



ನಂತರ ಬಳ್ಳಾರಿ ಜಿಲ್ಲಾ ಮಹಿಳಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷೆಯಾಗಿ ಮತ್ತೊಮ್ಮೆ ನೇಮಕಗೊಂಡಿರುವ ಶ್ರೀಮತಿ ಎಂ.ಎಸ್.ಮಂಜುಳ ಅವರನ್ನು ಶಾಲ್ ಹಾಕುವ ಮೂಲಕ ಸನ್ಮಾನಿಸಿ ಶುಭಾಶಯಗಳನ್ನು ತಿಳಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಪಕ್ಷದ ಹಿರಿಯ ನಾಯಕರಾದ ಕಲಕಂಬ ಪಂಪಾಪತಿ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಹುಮಯೂನ್ ಖಾನ್, ಮಹಾಪೌರರಾದ ಪಿ.ಗಾದೆಪ್ಪ, ಕ್ರೈಸ್ತ ಅಭಿವೃದ್ಧಿ ನಿಗಮದ ರಾಜ್ಯ ನಿರ್ದೇಶಕರಾದ ಜೇ.ಜೆ.ರವಿ ಕುಮಾರ್, ಡಿಸಿಸಿ ಕಾರ್ಯಾಧ್ಯಕ್ಷರಾದ ಭೋಯಾಪಾಟಿ ವಿಷ್ಣು, ನಗರ ಪ್ರಚಾರ ಸಮಿತಿಯ ಅಧ್ಯಕ್ಷರಾದ ಈರನ್ನ ಗೌಡ, ಡಿಸಿಸಿ ಕಾರ್ಯದರ್ಶಿಗಳಾದ ವೈ.ಶ್ರೀನಿವಾಸಲು, ಡಿಸಿಸಿ ಕಾರ್ಯಕಾ-ರಿಣಿ ಸಮಿತಿಯ ಸದಸ್ಯರಾದ ವೆಂಕಟ ಲಕ್ಷ್ಮೀ ನಾರಾಯಣ, ಮಹಾನಗರ ಪಾಲಿಕೆ ಸದಸ್ಯರಾದ ಶ್ರೀಮತಿ ಜಾನಕಮ್ಮ, ಮಿಂಚು ಶ್ರೀನಿವಾಸುಲು, ಸಮೀರ್, ಮುಂಚೂಣಿ ಘಟಗಳ ಅಧ್ಯಕ್ಷರುಗಳಾದ ಅಲಿವೇಲು ಸುರೇಶ್, ಕನೇಕಲ್ ಮಾಬುಸಾಬ್, ಅಖಿಲ ಅಹಮ್ಮದ್, ಅತ್ತವುಲ್ಲ, ಮುಖಂಡರುಗಳಾದ ಗೌಸ್, ಸತೀಶ್ ಚಕ್ರವರ್ತಿ, ಶ್ರೀಮತಿ ಮಲ್ಲಮ್ಮ, ಸುನೀತಾ, ವಿಜಯಲಕ್ಷ್ಮಿ, ಶ್ರೀಲತಾ, ಮಲ್ಲೇಶ್ವರಿ, ಗೌಸಿಯ, ಸಣ್ಣಹೊನ್ನೂರಪ್ಪ, ಲಿಂಗರಾಜು, ಬಲ್ಲಿ ಮೋಹನ್, ರಾಮ ಮೂರ್ತಿ ಮತ್ತು ಇತರರು ಉಪಸ್ಥಿತರಿದ್ದರು.

## ಕಲಬುರಗಿಯಲ್ಲಿ ಆಲ್ ಇಂಡಿಯಾ ಜನರಕ್ಷ ಪಾರ್ಟಿ ರಾಷ್ಟ್ರೀಯ ಅಧ್ಯಕ್ಷರ ಭೇಟಿ ಕಾರ್ಯಕರ್ತರ ಸಭೆ

ನೈಜ್ಯ ದೆಸೆ ನ್ಯೂಸ್

**ಕಲಬುರಗಿ: ಆಲ್ ಇಂಡಿಯಾ ಜನರಕ್ಷ ಪಾರ್ಟಿ (ರಾಷ್ಟ್ರೀಯ) ವತಿಯಿಂದ ಏಪ್ರಿಲ್ 17ರಂದು ಕಲಬುರಗಿಯಲ್ಲಿ ಮಹತ್ವದ ಸಭೆ ನಡೆಯಲಿದೆ.**

ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾದ ಜಿ.ಕೆ.ಎಸ್. ಲಕ್ಕಪ್ಪ ಬಿ. ಪೂಜಾರಿ ಅವರು ಅದೇ ದಿನ ಬೆಳಿಗ್ಗೆ 9:30ಕ್ಕೆ ನಗರಕ್ಕೆ ಆಗಮಿಸಲಿದ್ದು, ಅವರ ಸಮ್ಮುಖದಲ್ಲಿ ಪಕ್ಷದ ಕಾರ್ಯಕರ್ತರ ಸಭೆಯನ್ನು ಆಯೋಜಿಸಲಾಗಿದೆ. ನಗರದ ಹೊಸ ಜೇವರ್ಗಿ ರಸ್ತೆ, ಜೇವರ್ಗಿ ಕ್ರಾಸ್ ಸಮೀಪದ ಕೆ.ಎಸ್.ಐ.ಡಿ.ಸಿ ಕಾಂಪ್ಲೆಕ್ಸ್‌ನಲ್ಲಿರುವ ಪಕ್ಷದ ಕಚೇರಿಯಲ್ಲಿ ಈ ಸಭೆ ನಡೆಯಲಿದೆ.




ಸಭೆಯಲ್ಲಿ ಪಕ್ಷದ ಸಂಘಟನೆ ಬಲವರ್ಧನೆ, ಮುಂದಿನ ರಾಜಕೀಯ ಕಾರ್ಯತಂತ್ರಗಳು ಹಾಗೂ ಸದಸ್ಯತ್ವ ವೃದ್ಧಿ ಕುರಿತು ಚರ್ಚೆಗಳು ನಡೆಯಲಿವೆ ಎಂದು ತಿಳಿದುಬಂದಿದೆ.

ಈ ಸಭೆಗೆ ಕಲ್ಯಾಣ ಕರ್ನಾಟಕ ಭಾಗದ ಹಿರಿಯ ಮುಖಂಡರು, ಕಾರ್ಯಕರ್ತರು, ಸದಸ್ಯರು ಹಾಗೂ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಪಕ್ಷದ ಮುಖಂಡರು ಮನವಿ ಮಾಡಿದ್ದಾರೆ. ಪಕ್ಷದ ಕಲ್ಯಾಣ ಕರ್ನಾಟಕ ವಿಭಾಗದ ಅಧ್ಯಕ್ಷರಾದ ಸಿದ್ದು (ಗೌತಮ) ಹೆಚ್. ಜಮಾದಾರ ಅವರು ಈ ಕುರಿತು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂಬೇಡ್ಕರ್ ಆದರ್ಶಗಳ ಅನುಸರಣೆ ಅಗತ್ಯ: ದಮ್ಮೂರಮಠ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಅಂಬೇಡ್ಕರ್ ವಿಶ್ವಕಂಡ ಮಹಾನ್ ನಾಯಕ ಭಾರತದ ಏಕತೆ ವೈವಿಧ್ಯತೆ ಸಮಗ್ರತೆ ಮತ್ತು ಸಮಾನತೆಗೆ ಅವರ ಕೊಡುಗೆ ಅಪಾರ ಅವರನ್ನು ಕೇವಲ ಪೂಜೆಗೆ ಸೀಮಿತಗೊಳಿಸದೆ ಅವರ ಬದುಕಿನ ಆದರ್ಶಗಳನ್ನು ಅನುಸರಿಸುವ ಅಗತ್ಯ ಇದೆ ಎಂದು ಕ್ಷೇತ್ರ ಸಮನ್ವಯಾಧಿಕಾರಿ ಆರ್.ಬಿ.ದಮ್ಮೂರಮಠ ಹೇಳಿದರು.**

ಪಟ್ಟಣದ ತಹಸಿಲ್ದಾರ್ ಕಾರ್ಯಾಲಯದ ಸಭಾಂಗಣದಲ್ಲಿ ಹಮ್ಮಿಕೊಂಡ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಶೋಷಿತ ವರ್ಗವನ್ನು ಮುಖ್ಯವಾಹಿನಿಗೆ ತರಲು ತಮ್ಮ ಜೀವನವನ್ನೇ ಮುಡಿಪಾಗಿಟ್ಟ ಅವರು ಶಿಕ್ಷಣದಿಂದಲೇ ಸಮುದಾಯದ ಸಮಗ್ರ ಪ್ರಗತಿ ಸಾಧ್ಯವೆಂದು ಅಚಲವಾಗಿ ನಂಬಿದ್ದರು ಇವತ್ತು ನಾವು ಅವರ ಮೂಲ ಮಂತ್ರವಾದ ಶಿಕ್ಷಣ ಸಂಘಟನೆ ಹೋರಾಟ ಇದರಲ್ಲಿ ಶಿಕ್ಷಣವನ್ನು ಬಿಟ್ಟು ಉಳಿದೆರಡನ್ನು ಹಿಡಿದುಕೊಂಡಿದ್ದೇವೆ. ಈ ಸಮಾಜದ ಸಾಕ್ಷರತೆಯ ಪ್ರಮಾಣ ಬಹಳ ಕಡಿಮೆಯಿದೆ ಎಂದು ವರದಿಗಳು ತಿಳಿಸುತ್ತವೆ ಅವರ ಜಯಂತಿ ಆಚರಣೆಯ ಈ ಸಂದರ್ಭದಲ್ಲಿ ನಾವೆಲ್ಲರೂ ಆತ್ಮಾವಲೋಕನ ಮಾಡಿಕೊಳ್ಳುವ ಅಗತ್ಯ ಇದೆ ಸಮುದಾಯದ ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡಲು ಜಾಗೃತಿ ಮೂಡಿಸುವ ಕೆಲಸ ಮಾಡಬೇಕಾಗಿದೆ ಎಂದರು.



ದಲಿತ ಮುಖಂಡರಾದ ಡಿ.ಬಿ. ಹಾದಿಮನಿ ಹಾಗೂ ಜೈಭೀಮ್ ಮುತ್ತಗಿ ಮಾತನಾಡಿ ದೇಶಕ್ಕೆ ವಿಶ್ವ ಶ್ರೇಷ್ಠ ಸಂವಿಧಾನವನ್ನು ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರು ಕೊಟ್ಟು ಹೋಗಿದ್ದಾರೆ ದೇಶಕ್ಕೆ ಅವರ ಕೊಡುಗೆ ಅಪಾರವಾಗಿದೆ. ಅವರು ಸಮಾನತೆಯ ಅರಿವು ಮೂಡಿಸಿದ ಮಹಾನ್ ನಾಯಕ ಆದರೆ ಇಂದು ಅವರನ್ನು ಒಂದು ಜಾತಿಗೆ ಸೀಮಿತಗೊಳಿಸುವ ಕೆಲಸ ಆಗುತ್ತಿರುವುದು ನೋವಿನ ಸಂಗತಿ ಬಾಬಾ ಸಾಹೇಬ್ ಅವರು ಕೇವಲ ದಲಿತರ, ಹಿಂದುಳಿದ ವರ್ಗದವರಿಗೆ ಮಾತ್ರವಲ್ಲ ಭವ್ಯ ಭಾರತದ ಭವಿಷ್ಯದ ಪ್ರಜೆಗಳ ನಾಯಕರಾಗಿದ್ದಾರೆ ಅವರು ಸರ್ವ ಜನಾಂಗದ ಆಶಾಕಿರಣ.

ಅವರಂಥಹ ಪಾಂಡಿತ್ಯ ಹೊಂದಿದ ವ್ಯಕ್ತಿ ದೇಶದಲ್ಲಿ ಇನ್ನೊಬ್ಬನಿಲ್ಲ, ಬಾಬಾ ಸಾಹೇಬರು ತಮಗಾಗಿ ಬದುಕಲಿಲ್ಲ ದೇಶದ ಸರ್ವ ಜನರ ಹಿತಕ್ಕಾಗಿ ಬದುಕಿದರು. ಅವರ ಜೀವನದ ಆದ-'ರ್ಶಗಳನ್ನು ಪ್ರಾಂಜಲ ಮನಸ್ಸಿನಿಂದ ಅಧ್ಯಯನ ಮಾಡುವ ಅಗತ್ಯ ಇದೆ ಎಂದರು. ತಾಲೂಕ ಪಂಚಾಯತ ಮುಖ್ಯ ಕಾರ್ಯನಿರ್ವಣಾಧಿಕಾರಿ ಅನಸೂಯಾ ಚಲವಾದಿ ಅಧ್ಯಕ್ಷತೆ ವಹಿಸಿದ್ದರು. ಶಿಕ್ಷಕ ರಾಜು ವಿಜಾಪುರ ಕಾರ್ಯಕ್ರಮ ನಿರ್ವಹಿಸಿದರು. ವೇದಿಕೆ ಕಾರ್ಯಕ್ರಮ ಮುನ್ನ ಪಟ್ಟಣದ ಅಂಬೇಡ್ಕರ್ ಸರ್ಕಲ್ ದಲ್ಲಿರುವ ಡಾ.ಬಿ. ಆರ್.ಅಂಬೇಡ್ಕರ್ ಅವರ ಪುತ್ಥಳಿಗೆ ತಹಶೀಲ್ದಾರ ಡಾ.ವಿನಯಾ ಹೂಗಾರ ಅವರ ನೇತೃತ್ವದಲ್ಲಿ ತಾಲೂಕ ಆಡಳಿತ ಹಾಗೂ ವಿವಿಧ ದಲಿತ ಪರ ಸಂಘಟನೆಗಳ ವತಿಯಿಂದ ಪುಷ್ಪ ನಮನ ಸಲ್ಲಿಸಲಾಯಿತು.

ಕಾರ್ಯಕ್ರಮದಲ್ಲಿ ತಾಪಂ ಇಓ ಅನಸೂಯಾ ಚಲವಾದಿ, ಪುರಸಭೆ ಮುಖ್ಯಾಧಿಕಾರಿ ವಸಂತ ಪವಾರ,ಪಿಎಸ್ಐ ಜ್ಯೋತಿ ಖೋತ, ವ್ಯವಸ್ಥಾಪಕ ಶಿವಲಿಂಗಪ್ಪ ಹಚಡದ, ನಿವೃತ್ತ ಪೊಲೀಸ್ ವರಿಷ್ಟಾಧಿಕಾರಿ ಎಸ್ ಬಿ ಕಟ್ಟಿಮನಿ, ಮುಖಂಡರಾದ ಮುತ್ತಪ್ಪ ಚಮಲಾಪೂರ,ಬಸವರಾಜ ಕಟ್ಟಿಮನಿ, ಎಂ ಎಸ್ ಸರಶಟ್ಟಿ, ಮಲ್ಲಿಕಾರ್ಜುನ ಪಟ್ಟಣಶಟ್ಟಿ,ಹುಸೇನ ಜಮಾದಾರ, ಅಮಿತ್ ಮನಗೂಳಿ, ಅಬೂಬಕರ ಲಾಹೋರಿ, ಶಫೀಕ ಇನಾಮದಾರ, ಹಣಮಂತ ಕೊಡಗಾನೂರ,ನಾಗೇಶ ಕಟ್ಟಿಮನಿ,ಮಹೇಶ ಚಲವಾದಿ, ರವಿ ಕಟ್ಟಿಮನಿ, ಪರಶುರಾಮ ಕಟ್ಟಿಮನಿ, ಸಿದ್ದು ಬಾರಿಗಿಡದ, ರಾಮಣ್ಣ ಕಟ್ಟಿಮನಿ,ಸಂಜೀವಪ್ಪ ಬರದೇನಾಳ, ಗೋಪಾಲ ಕಟ್ಟಿಮನಿ, ಬಸ್ಸು ಮಾದರ,ಆಸೀಫ ಕೆಂಭಾವಿ, ಜುಮಣ್ಣ ನಾಲತವಾಡ, ಲತೀಫ ಬೀಳಗಿ,ಬಡೇಸಾ ಚೌದ್ರಿ ಹಾಗೂ ತಾಲೂಕ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿ ಹಾಗೂ ಸಿಬ್ಬಂದಿ ಇದ್ದರು.

## ಸಾಹಿತ್ಯ ಸಿಂಚನ

ಹೂವು

ಹೂವಿನಂತೆ ಮೃದುವಾದ ಮನಸು,
ನಗುವಿನಂತೆ ಸುಗಂಧ ಹರಡು,
ಪ್ರತಿ ಬೆಳಗಿನ ಹನಿಯೊಳಗೆ
ಹೊಸ ಕನಸುಗಳು ಅರಳಲಿ.

ಬಣ್ಣ ಬಣ್ಣದ ಹೂಗಳಂತೆ
ಜೀವನವೂ ರಂಗಿನವಾಗಲಿ,
ಸ್ನೇಹ ಪ್ರೀತಿಯ ಸುಗಂಧದಿಂದ
ಮನದ ತೋಟ ತುಂಬಿ ಹರಿಯಲಿ.

ಮೌನದಲ್ಲೂ ಮಾತಾಡುವದು
ಹೂವಿನ ಸೌಮ್ಯ ಭಾಷೆ,
ಕೊಡುತ್ತಲೇ ಬದುಕುವುದು
ಅದರ ಸುಂದರ ಪಾಠವೇ.

ಹೂವು ಕಡಿಯಾದರೂ ಪರಿಮಳ ಉಳಿಯುತ್ತದೆ,
ಒಳ್ಳೆಯ ಮನಸ್ಸು ಹಾಗೆಯೇ ಉಳಿಯುತ್ತದೆ,

ಜೀವನದ ದಾರಿಯಲ್ಲಿ ಸದಾ
ಸೌಂದರ್ಯ ಬಿತ್ತುವ ಹೂವಾಗೋಣ.

ರವಿ ಕಿರಣ

## ಮತ್ತೆ ಬಂದಿದೆ ಕಾಗ್ನಿಜೆಂಟ್ 'ಟೆಕ್ನೋವರ್ಸ್ ಹ್ಯಾಕಥಾನ್ 2026': 20,000 ವಿದ್ಯಾರ್ಥಿಗಳು ಭಾಗಿ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ನೈಜ ಜಗತ್ತಿನ ಸಮಸ್ಯೆಗಳಿಗೆ ಕೃತಕ ಬುದ್ಧಿಮತ್ತೆ (ಎಐ) ಆಧಾರಿತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಯುವ ಪ್ರತಿಭೆಗಳಿಗೆ ವೇದಿಕೆ ಕಲ್ಪಿಸಲು, ಪ್ರಮುಖ ಐಟಿ ಸಂಸ್ಥೆ 'ಕಾಗ್ನಿಜೆಂಟ್' ತನ್ನ ಪ್ರತಿಷ್ಠಿತ 'ಟೆಕ್ನೋವರ್ಸ್ ಹ್ಯಾಕಥಾನ್ 2026'ಗೆ ಚಾಲನೆ ನೀಡಿದೆ. ಈ ಹಿಂದೆ ಪ್ರಾದೇಶಿಕ ಮಟ್ಟಕ್ಕೆ ಸೀಮಿತವಾಗಿದ್ದ ಈ ಸ್ಪರ್ಧೆಯು, ತನ್ನ ಮೂರನೇ ಆವೃತ್ತಿಯಲ್ಲಿ ರಾಷ್ಟ್ರೀಯ ಮಟ್ಟಕ್ಕೇರಿದೆ. ಭಾರತದಾದ್ಯಂತ 400ಕ್ಕೂ ಹೆಚ್ಚು ಎಂಜಿನಿಯರಿಂಗ್ ಕಾಲೇಜುಗಳಿಂದ ಅಂತಿಮ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ 20,000ಕ್ಕೂ ಅಧಿಕ ವಿದ್ಯಾರ್ಥಿಗಳು ಈ ಹ್ಯಾಕಥಾನ್‌ನಲ್ಲಿ ಪಾಲ್ಗೊಂಡು ತಮ್ಮ ತಾಂತ್ರಿಕ ಕೌಶಲ್ಯವನ್ನು ಪ್ರದರ್ಶಿಸಲಿದ್ದಾರೆ.**




ನೈಜ ಜಗತ್ತಿನ ಸಮಸ್ಯೆಗಳಿಗೆ ಎಐ ಪರಿಹಾರ ಕಾಗ್ನಿಜೆಂಟ್ ಇಂಡಿಯಾದ ಗ್ಲೋಬಲ್ ಆಪರೇಷನ್ಸ್ ಅಧ್ಯಕ್ಷ ಹಾಗೂ ಸಿಎಂಡಿ ರಾಜೇಶ್ ವಾರಿಯರ್ ಈ ಕುರಿತು ಮಾತನಾಡಿ, ಈ ಹ್ಯಾಕಥಾನ್ ವಿದ್ಯಾರ್ಥಿಗಳಿಗೆ ತಮ್ಮ ಶೈಕ್ಷಣಿಕ ಜ್ಞಾನವನ್ನು ನೈಜ ಜಗತ್ತಿನ ಅನ್ವಯಿಕಗಳಿಗೆ ಅಪ್ಲಿಕೇಷನ್‌ಗಳಿಗೆ ಬಳಸುವ ಅಪೂರ್ವ ಅವಕಾಶವನ್ನು ನೀಡುತ್ತದೆ. ಸ್ಪರ್ಧಿಗಳು ಕಾಗ್ನಿಜೆಂಟ್‌ನ ತಜ್ಞರೊಂದಿಗೆ ನೇರವಾಗಿ ಸಂವಹನ ನಡೆಸಿ, ಉದ್ಯಮಗಳು ಹೊಸತನವನ್ನು ಹೇಗೆ ಅಳವಡಿಸಿಕೊಳ್ಳುತ್ತವೆ ಎಂಬುದನ್ನು ಕಲಿಯಲಿದ್ದಾರೆ. ಬ್ಯಾಂಕಿಂಗ್, ವಿಮೆ, ಆರೋಗ್ಯ, ಜೀವ ವಿಜ್ಞಾನ, ಚಿಲ್ಲರೆ ವ್ಯಾಪಾರ (ರೀಟೇಲ್), ಉತ್ಪಾದನೆ, ಸಂವಹನ, ಮಾಧ್ಯಮ ಮತ್ತು ತಂತ್ರಜ್ಞಾನ ಹಾಗೂ ಇಂಧನ ಕ್ಷೇತ್ರಗಳ ಸಮಸ್ಯೆಗಳಿಗೆ ಕೃತಕ ಬುದ್ಧಿಮತ್ತೆ ಬಳಸಿ ಪರಿಹಾರ ರೂಪಿಸುವುದು ಈ ಸ್ಪರ್ಧೆಯ ಪ್ರಮುಖ ಉದ್ದೇಶವಾಗಿದೆ. ಜೊತೆಗೆ, ಈ ಹ್ಯಾಕಥಾನ್‌ನಲ್ಲಿ ಶೇ.50ರಷ್ಟು ಮಹಿಳಾ ಭಾಗವಹಿಸುವಿಕೆಯನ್ನು ಕಡ್ಡಾಯಗೊಳಿಸಿದೆ. ಪ್ರತಿ ಕಾಲೇಜಿನಿಂದ ಎಷ್ಟು ತಂಡಗಳು ಬೇಕಾದರೂ ಭಾಗವಹಿಸಬಹುದು. ಆದರೆ, ನಾಲ್ಕು ಸದಸ್ಯರ ಪ್ರತಿಯೊಂದು ತಂಡದಲ್ಲಿ ಕನಿಷ್ಠ ಇಬ್ಬರು ಮಹಿಳಾ ವಿದ್ಯಾರ್ಥಿಗಳು ಇರುವುದು ಕಡ್ಡಾಯವಾಗಿದೆ. ಮೇ ತಿಂಗಳಿನಲ್ಲಿ ಫಿನಾಲೆ ಈ ಬೃಹತ್ ಹ್ಯಾಕಥಾನ್ ಪ್ರಕ್ರಿಯೆಗಳು ಮೇ ತಿಂಗಳಲ್ಲಿ ಮುಕ್ತಾಯಗೊಳ್ಳಲಿದ್ದು, ಪುಣೆಯಲ್ಲಿರುವ ಕಾಗ್ನಿಜೆಂಟ್ ಕ್ಯಾಂಪಸ್‌ನಲ್ಲಿ ನಡೆಯುವ ಅದ್ದೂರಿ ಸಮಾರಂಭದಲ್ಲಿ ಅಗ್ರ ಮೂರು ತಂಡಗಳನ್ನು ವಿಜೇತರೆಂದು ಘೋಷಿಸಿ ಸನ್ಮಾನಿಸಲಾಗುತ್ತದೆ.

# ಭವಿಷ್ಯದಲ್ಲಿ ಹೆಣ್ಣು ಮಕ್ಕಳಿಗೆ ಗರ್ಭಕಂಠದ ಕ್ಯಾನ್ಸರ್ ತಡೆಗಾಗಿ ಆರೋಗ್ಯದ ದೃಷ್ಟಿಯಿಂದ ಯಾವುದೆ ತಪ್ಪು ನಂಬಿಕೆ, ಸುಳ್ಳು ಸುದ್ದಿಗಳನ್ನು ನಂಬದೆ ಹೆಚ್.ಪಿ.ವಿ ಲಸಿಕೆ ತಪ್ಪದೆ ಹಾಕಿಸಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು: 14 ವರ್ಷದ ಹೆಣ್ಣು ಮಕ್ಕಳಿಗೆ ಹೆಚ್.ಪಿ.ವಿ ಲಸಿಕೆಯನ್ನು ಪಾಲಕರು ಯಾವುದೇ ತಪ್ಪು ನಂಬಿಕೆಗಳು, ಸಾಮಾಜಿಕ ಜಾಲತಾಣಗಳಲ್ಲಿ ವೈಜ್ಞಾನಿಕವಾಗಿ ಗೊತ್ತಿಲ್ಲದೆ ಕೆಲವರು ಹರಡುವ ಸುಳ್ಳು ಸುದ್ದಿಗಳನ್ನು ನಂಬದೆ, ಯಾವುದೇ ಹಿಂದೇಟು ಹಾಕದೆ ಭವಿಷ್ಯದಲ್ಲಿ ಹೆಣ್ಣು ಮಕ್ಕಳನ್ನು ಗರ್ಭಕಂಠದ ಕ್ಯಾನ್ಸರ್‌ನಿಂದ ದೂರವಿರಿಸಲು ಎಲ್ಲ ಪಾಲಕರು ಮುಂದೆ ಬರಲು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ ನಂದಿತಾ ಎಮ್ ಎನ್ ಮನವಿ ಮಾಡಿದರು.**

ದೇವದುರ್ಗ ತಾಲೂಕಿನ ಕರಿಗುಡ್ಡ ಹಾಗೂ ವಿವಿಧ ಗ್ರಾಮಗಳಲ್ಲಿ ಹೆಚ್‌ಪಿವಿ ಲಸಿಕೆ ಹಾಗೂ ಸಾರ್ವತ್ರಿಕ ಲಸಿಕಾಕರಣ ಖುದ್ದು ಪರಿಶೀಲಿಸಿ ಮಾತನಾಡುತ್ತಾ,



ಹೆಣ್ಣು ಮಕ್ಕಳ ಜೀವನದಲ್ಲಿ ಗಂಭೀರ ಆರೋಗ್ಯ ಸಮಸ್ಯೆಯನ್ನುಂಟು ಮಾಡುವ ಗರ್ಭಕಂಠದ ಕ್ಯಾನ್ಸರ್ ತಡೆಗೆ ಹೆಚ್‌ಪಿವಿ ಲಸಿಕೆ ಅತ್ಯಂತ ಉಪಯುಕ್ತವಾಗಿದ್ದು, ಈಗಾಗಲೆ ಲಸಿಕೆಯನ್ನು ಹಾಕಲಾಗುತ್ತಿದ್ದು, ದಯವಿಟ್ಟು ಅನಗತ್ಯ ತಪ್ಪು ಮಾಹಿತಿಗಳಿಗೆ ಕಿವಿಗೊಡದೆ, 14 ವರ್ಷದ ಹೆಣ್ಣು ಮಕ್ಕಳಿಗೆ ಉಚಿತ ಹೆಚ್.ಪಿ.ವಿ (ಹೂಮನ್ ಪ್ಯಾಪಿಲೋಮ ವೈರಸ್) ವಿರುದ್ಧದ ಲಸಿಕೆ ಹಾಕಿಸಲು ವಿನಂತಿಸಿದರು. ತಾಲೂಕಾ ಆರೋಗ್ಯಾಧಿಕಾರಿ ಡಾ ಬನದೇಶ ಮಾತನಾಡಿ, ಪೋಷಕರು ತಮ್ಮ ಮಕ್ಕಳಿಗೆ ಪ್ರಾಥಮಿಕ ಆರೋಗ್ಯ ಕೇಂದ್ರವಾಗಲಿ ಅಥವಾ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಬಂದು ಲಸಿಕೆ ಹಾಕಿಸಲು ಕೋರಿದರು.

ಗರ್ಭಕಂಠದ ಕ್ಯಾನ್ಸರ್‌ಗೆ ಕಾರಣಗಳು: ಸಾಮಾನ್ಯವಾಗಿ ವೈಯಕ್ತಿಕ ಶುಚಿತ್ವ, ಜನನಾಂಗಗಳಲ್ಲಿ ತೊಂದರೆ, ಹುಣ್ಣು, ಅಸುರಕ್ಷಿತ ಲೈಂಗಿಕ ಸಂಪರ್ಕದಿಂದ ಹರಡುವ ಹೂಮನ್ ಪ್ಯಾಪಿಲೋಮ ವೈರಸ್ (ಹೆಚ್.ಪಿ.ವಿ) ಸೋಂಕು ಕ್ರಮೇಣ ಗರ್ಭಕಂಠದ ಜೀವಕೋಶಗಳಲ್ಲಿ ಬದಲಾವಣೆಗಳಾಗಿ ಕ್ಯಾನ್ಸರ್ ಆಗಿ ಬದಲಾಗುತ್ತದೆ. ಈ ಹಿನ್ನಲೆಯಲ್ಲಿ ಮಾರಕವಾಗುವುದನ್ನು ತಡೆಯಲು ಹೆಚ್.ಪಿ.ವಿ ಲಸಿಕೆಯು ಸೂಕ್ತವಾಗಿದೆ. ಈ ಸಂದರ್ಭದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗೀತಮ್ಮ, ಸಿಬ್ಬಂದಿಯವರಾದ ಶಾರೋನ, ನರಸಮ್ಮ, ಮನೋಜ್, ಸೇರಿದಂತೆ ಪಿ.ಹೆಚ್.ಸಿ.ಓ, ಆಶಾ ಕಾರ್ಯಕರ್ತೆಯರು ಹಾಗೂ ತಾಯಂದಿರ ಭಾಗವಹಿಸಿದ್ದರು.

# ಕೃಷಿ ಉತ್ಪನ್ನ ಮಾರುಕಟ್ಟೆ ಅಭಿವೃದ್ಧಿಗೆ ಅನುದಾನ ನೀಡಲು ಶಾಸಕರಿಗೆ ಮನವಿ



ನೈಜ್ಯ ದೆಸೆ ನ್ಯೂಸ್

**ಮಸ್ಕಿ: ನೂತನ ಭ್ರಮರಾಂಭ ಕೃಷಿ ಉತ್ಪನ್ನ ಮಾರುಕಟ್ಟೆಯ ಸಮಗ್ರ ಅಭಿವೃದ್ಧಿಗೆ ಅಗತ್ಯ ಅನುದಾನ ಒದಗಿಸುವಂತೆ ಶಾಸಕ ಆರ್. ಬಸನಗೌಡ ತುರವಿಹಾಳ ಅವರಿಗೆ ಕೃಷಿ ಉತ್ಪನ್ನ ಮಾರುಕಟ್ಟೆ ಆಡಳಿತ ಮಂಡಳಿ ಬುಧವಾರ ಮನವಿ ಸಲ್ಲಿಸಿದೆ.**

ಲಿಂಗಸುಗೂರು ಕೃಷಿ ಉತ್ಪನ್ನ ಮಾರುಕಟ್ಟೆಯಿಂದ ಬೇರ್ಪಟ್ಟು ಸ್ವತಂತ್ರ ಮಾರುಕಟ್ಟೆಯಾಗಿ ಕಾರ್ಯಾರಂಭಿಸಿರುವ ಭ್ರಮರಾಂಭ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಹಲವು ಮೂಲಭೂತ ಸೌಲಭ್ಯಗಳ ಕೊರತೆ ಎದುರಾಗಿದ್ದು, ಅವುಗಳನ್ನು ತುರ್ತಾಗಿ ಅಭಿವೃದ್ಧಿಪಡಿಸುವ ಅಗತ್ಯವಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ. ಮಾರುಕಟ್ಟೆ ಆವರಣದಲ್ಲಿ ರಸ್ತೆ ಅಭಿವೃದ್ಧಿ, ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯ ನಿರ್ಮಾಣ, ಬೀದಿ ದೀಪಗಳ ಅಳವಡಿಕೆ, ಬಾಕಿ ಉಳಿದ ಕಾಂಪೌಂಡ್ ಕಾಮಗಾರಿ ಪೂರ್ಣಗೊಳಿಸುವುದು ಹಾಗೂ ಮುಖ್ಯ ದ್ವಾರಬಾಗಿಲು (ಗೇಟ್‌ಗಳು) ನಿರ್ಮಾಣಕ್ಕೆ ಸರ್ಕಾರದಿಂದ ಅನುದಾನ ಮಂಜೂರು ಮಾಡಿಸಲು ಕ್ರಮ ಕೈಗೊಳ್ಳುವಂತೆ ಶಾಸಕರಿಗೆ ಮನವಿ ಮಾಡಲಾಗಿದೆ ಎಂದು ಕೃಷಿ ಉತ್ಪನ್ನ ಮಾರುಕಟ್ಟೆ ಅಧ್ಯಕ್ಷ ಸಿದ್ದನಗೌಡ ಮಾಟೂರು ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ನಿಂಗಯ್ಯ ಮಲ್ಲದಗುಡ್ಡ, ಪಂಪಣ್ಣ, ಅಮರೇಗೌಡ ಹಾಲಾಪೂರ, ಕುಸುಮ ಬಲವಂತರಾಯ, ಮೌನಪ್ಪ ಹಂಪನಾಳ, ಪೂರ್ಣಿಮಾ ವಿರೇಶ ಪಾಟೀಲ್, ಹಿರೇ ಮೌಲಸಾಬ, ದುರಗಪ್ಪ ಹಡಗಲಿ, ಮಲ್ಲರಡ್ಡೆಪ್ಪ, ಅಮರೇಶ ಗೋನವಾರ, ಸಂಗಣ್ಣ ಯಲಿಗಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವಲಸೆ ತಡೆಗೆ ಉದ್ಯೋಗ ಖಾತ್ರಿ ಯೋಜನೆ ಪರಿಣಾಮಕಾರಿ ಜಾರಿ :ಖಾಲೀದ್ ಅಹಮದ್

ನೈಜ್ಯ ದೆಸೆ ನ್ಯೂಸ್

**ಮಾನವಿ: ಕೂಲಿ ಕಾರ್ಮಿಕರು ವಲಸೆ ಹೋಗುವುದನ್ನು ತಡೆಯಲು ಉದ್ಯೋಗ ಖಾತ್ರಿ ಯೋಜನೆಯಡಿ ಮಾನ್ವಿ ತಾಲ್ಲೂಕಿನಲ್ಲಿ ವ್ಯಾಪಕವಾಗಿ ಕೆಲಸಗಳನ್ನು ನೀಡಲಾಗುತ್ತಿದೆ ಎಂದು ಕಾರ್ಯನಿರ್ವಾಹಕ ಅಧಿಕಾರಿ ಖಾಲೀದ್ ಅಹಮದ್ ತಿಳಿಸಿದ್ದಾರೆ. ತಾಲ್ಲೂಕಿನ 15 ಗ್ರಾಮ ಪಂಚಾಯಿತಿಗಳಲ್ಲಿ ಒಟ್ಟು 78 ಕಾಮಗಾರಿಗಳು ಪ್ರಗತಿಯಲ್ಲಿ ಇದ್ದು, 5721ಕ್ಕೂ ಹೆಚ್ಚು ಅಪ್ರಶಿಕ್ಷಿತ ಕಾರ್ಮಿಕರಿಗೆ ಉದ್ಯೋಗ ಒದಗಿಸಲಾಗಿದೆ ಎಂದು ಮಾಹಿತಿ ನೀಡಿದರು.**

ಉದ್ಯೋಗಕ್ಕಾಗಿ ಕೂಲಿ ಕಾರ್ಮಿಕರಿಂದ ನಮೂನೆ-06 ಅರ್ಜಿಗಳನ್ನು ಪಡೆದು




ಕೆಲಸ ನೀಡಲಾಗುತ್ತಿದ್ದು, ಗ್ರಾಮೀಣ ಪ್ರದೇಶದ ಜನರು ನಗರಗಳಿಗೆ ವಲಸೆ ಹೋಗದಂತೆ ತಡೆಯುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗಿದೆ. ಸಾದಪೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಸೀಕಲ್ ಗ್ರಾಮದಲ್ಲಿ ನಡೆದ ಕಾರ್ಯಕ್ರಮದಲ್ಲಿ ಓಒಖ ತಂತ್ರಾಂಶದ ಮೂಲಕ ಫೇಸ್ ಆಥೆಂಟಿಕೇಶನ್ ಬಳಸಿ ದಿನಕ್ಕೆ ಎರಡು ಬಾರಿ ಹಾಜರಾತಿ ದಾಖಲಿಸುವುದು ಕಡ್ಡಾಯ ಎಂದು ತಿಳಿಸಲಾಯಿತು. ಗಂಡು-ಹೆಣ್ಣು ಇಬ್ಬರಿಗೂ ದಿನಕ್ಕೆ 370 ರೂ ಸಮಾನ ಕೂಲಿ ನೀಡಲಾಗುತ್ತಿದ್ದು, ಪ್ರತಿ ಕುಟುಂಬಕ್ಕೆ ವರ್ಷಕ್ಕೆ 100 ದಿನಗಳ ಕೆಲಸ ದೊರೆಯುತ್ತದೆ.

ಇದಲ್ಲದೆ, ಪ್ರಧಾನ ಮಂತ್ರಿ ಭೀಮಾ ಸುರಕ್ಷಾ ಯೋಜನೆ ಮತ್ತು ಜೀವನ್ ಜ್ಯೋತಿ ಯೋಜನೆಗಳ ಕುರಿತು ಜಾಗೃತಿ ಮೂಡಿಸಲಾಯಿತು. ಹಿರಿಯ ನಾಗರಿಕರು, ವಿಶೇಷ ಚೇತನರು ಹಾಗೂ ಗರ್ಭಿಣಿಯರಿಗೆ ಶೇಕಡಾ 50% ಕೆಲಸ ಮಾಡಿದರೂ ಪೂರ್ಣ ಕೂಲಿ ನೀಡುವ ವ್ಯವಸ್ಥೆ ಇದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಸಿಬ್ಬಂದಿಗಳಿಗೆ ಓಒಖ ಹಾಜರಾತಿಯನ್ನು ಕಡ್ಡಾಯವಾಗಿ ಎರಡು ಬಾರಿ ದಾಖಲಿಸುವಂತೆ ಸೂಚನೆ ನೀಡಲಾಯಿತು.

# ದಲಿತ ಹೋರಾಟಗಾರ ಸಾಬಣ್ಣ ಕಮಲದಿನ್ನಿ ಅವರಿಗೆ ಸನ್ಮಾನ

ನೈಜ್ಯ ದೆಸೆ ನ್ಯೂಸ್

**ದೇವದುರ್ಗ: ತಾಲೂಕಿನ ಜಾಲಹಳ್ಳಿ ಪ್ರವಾಸಿ ಮಂದಿರದಲ್ಲಿ 14-04-2026 ರಂದು ಕಮಲದಿನ್ನಿ ಗ್ರಾಮದ ದಲಿತ ಹೋರಾಟಗಾರರಾದ ಸಾಬಣ್ಣ ಕಮಲದಿನ್ನಿ ಅವರಿಗೆ ಗ್ರಾಮಸ್ಥರಿಂದ ಗೌರವ ಸನ್ಮಾನ ನೆರವೇರಿತು.**

ಬಾಬು ಜಗಜೀವನ್ ರಾಮ್ ಜಯಂತಿ ಅಂಗವಾಗಿ ದೇವದುರ್ಗ ತಾಲೂಕು ಆಡಳಿತ ವತಿಯಿಂದ ಸಮಾಜಸೇವಾ ಪ್ರಶಸ್ತಿ ದೊರೆತ ಹಿನ್ನೆಲೆಯಲ್ಲಿ, ಕಮಲದಿನ್ನಿ ಹಾಗೂ ಜಾಲಹಳ್ಳಿ ಗ್ರಾಮದ ಮುಖಂಡರು ಸೇರಿ ಶಾಲು ಹೊದಿಸಿ, ಹಾರ ಹಾಕಿ, ಡಾ. ಅಂಬೇಡ್ಕರ್ ಅವರ ಭಾವಚಿತ್ರ ನೀಡಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಡಿಎಸ್‌ಎಸ್ ಮುಖಂಡರಾದ ಬಾಳಪ್ಪ ಅವರು ಮಾತನಾಡಿ, "ಸರಳತೆ ಮತ್ತು ಸಜ್ಜನಿಕೆಗೆ ಹೆಸರಾಗಿರುವ ಸಾಬಣ್ಣ ಕಮಲದಿನ್ನಿ



ಅವರ ಹೋರಾಟದ ಜೀವನವನ್ನು ಗುರುತಿಸಿ ಸಮಾಜಸೇವಾ ಪ್ರಶಸ್ತಿ ನೀಡಿರುವುದು ಶ್ಲಾಘನೀಯ" ಎಂದು ಹೇಳಿದರು.

ಜಾಲಹಳ್ಳಿಯ ಮಾಜಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ರಂಗಣ್ಣ ಕೋಲ್ಕಾರ್ ಮಾತನಾಡಿ, "ಸಾಬಣ್ಣ ಕಮಲದಿನ್ನಿ ಅವರಿಗೆ ದೊರೆತ ಈ ಗೌರವವು ಎಲ್ಲಾ ಹೋರಾಟಗಾರರಿಗೆ ಸಂತೋಷ ತಂದಿದೆ. ಅವರು ಪ್ರಗತಿಪರ ಹೋರಾಟಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ತಮ್ಮದೇ ಆದ ಗುರುತನ್ನು ಮೂಡಿಸಿದ್ದಾರೆ" ಎಂದರು. ಪತ್ರಕರ್ತ ಗಿರಿಯಪ್ಪ ಪೂಜಾರಿ ಮಾತನಾಡಿ, "ತಾಲೂಕು ಆಡಳಿತದಿಂದ ಹೋರಾಟಗಾರರಿಗೆ ಸಮಾಜಸೇವಾ ಪ್ರಶಸ್ತಿ ನೀಡಿರುವುದು ಅತ್ಯಂತ ಪ್ರಶಂಸನೀಯ. ಇಂದಿನ ದಿನಗಳಲ್ಲಿ ಸರಳ ವ್ಯಕ್ತಿತ್ವದೊಂದಿಗೆ ಜನರ ಸಮಸ್ಯೆಗಳಿಗೆ ಸ್ಪಂದಿಸುವವರು ಅಪರೂಪ" ಎಂದು ಅಭಿಪ್ರಾಯಪಟ್ಟರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಸಾಬಣ್ಣ ಕಮಲದಿನ್ನಿ ಅವರು, "ನನ್ನನ್ನು ಗೌರವಿಸಿದ ಕಮಲದಿನ್ನಿ ಮತ್ತು ಜಾಲಹಳ್ಳಿ ಗ್ರಾಮದ ಹಿರಿಯರು ಹಾಗೂ ಮುಖಂಡರಿಗೆ ಹೃತ್ಪೂರ್ವಕ ಧನ್ಯವಾದಗಳು" ಎಂದು ಹೇಳಿದರು. ಈ ಕಾರ್ಯಕ್ರಮವನ್ನು ಗ್ರಾಮದ ಹಿರಿಯರಾದ ಅಮರೇಗೌಡ ಕಮಲದಿನ್ನಿ ಹಾಗೂ ಶರಣಗೌಡ ಕಮಲದಿನ್ನಿ ಆಯೋಜಿಸಿದ್ದರು. ಕಾರ್ಯಕ್ರಮದಲ್ಲಿ ರಂಗಣ್ಣ ಕೋಲ್ಕಾರ್, ಭೀಮಣ್ಣ ಗುಮದಾರ್, ಬಾಳಪ್ಪ (ಡಿಎಸ್-ಎಸ್), ರಮೇಶ್ ಬಾಗೂರು, ಪ್ರಕಾಶ್ ಹೊನ್ನುಟಗಿ (ಶಿಕ್ಷಕರು), ಗಿರಿಯಪ್ಪ ಪೂಜಾರಿ (ಪತ್ರಕರ್ತ), ಬಾಬಾ ಮೆಡಿಕಲ್, ಅಬ್ದುಲ್ ರೆಹಮಾನ್ ಖುರೇಷಿ (ಗ್ರಾಮ ಪಂಚಾಯತ್ ಸದಸ್ಯರು), ಇಮಾಮಸಾಬ್ ಉದ್ಧಾರ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

# ಬಳಗಾನೂರಿನ ಪಟ್ಟಣ ಪಂಚಾಯ್ತಿಯಲ್ಲಿ ಡಾ,ಬಿ,ಆರ್,ಅಂಬೇಡ್ಕರರ 135ನೇ ಜಯಂತಿ ಅದ್ದೂರಿ ಆಚರಣೆ

ನೈಜ್ಯ ದೆಸೆ ನ್ಯೂಸ್

**ಬಳಗಾನೂರು: ಬಳಗಾನೂರಿನ ಗಾಳಿಯೇ ಇಂದು ಒಂದು ಘೋಷಣೆ ಹೊತ್ತು ತಂದಂತಿತ್ತು "ಜೈ ಭೀಮ್!" ಎಂದು. ಪಟ್ಟಣ ಪಂಚಾಯ್ತಿ ಕಾರ್ಯಾಲಯದಲ್ಲಿ ವಿಶ್ವರತ್ನ ಡಾಕ್ಟರ್ ಬಿ.ಆರ್. ಅಂಬೇಡ್ಕರರ 135ನೇ ಜಯಂತಿ ಮಹೋತ್ಸವವನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಗಿದ್ದು, ಪಟ್ಟಣವೇ ಒಂದು ಸಂಭ್ರಮದ ವೇದಿಕೆಯಾಗಿ ರೂಪಾಂತರಗೊಂಡಿತ್ತು.**

ಕಾರ್ಯಕ್ರಮವು ಬೆಳಿಗ್ಗೆಯಿಂದಲೇ ಉತ್ಸಾಹದ ಅಲೆಗಳಲ್ಲಿ ಮುಳುಗಿತ್ತು. ಪಟ್ಟಣ ಪಂಚಾಯ್ತಿ ಕಾರ್ಯಾಲಯದಲ್ಲಿ ಅಂಬೇಡ್ಕರರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಗೌರವ ನಮನ ಸಲ್ಲಿಸಲಾಯಿತು. ಸಭಾಂಗಣದಲ್ಲಿ ನೆರೆದಿದ್ದ ಜನರ ಮುಖಗಳಲ್ಲಿ ಹೆಮ್ಮೆ, ಕೃತಜ್ಞತೆ ಮತ್ತು ಪ್ರೇರಣೆಯ ಕಿರಣಗಳು ಹೊಳೆಯುತ್ತಿದ್ದವು. ನಂತರ ಗಣ್ಯರು ಮತ್ತು ಸಾರ್ವಜನಿಕರು ಪಟ್ಟಣದ ಡಾಕ್ಟರ್ ಬಿ.ಆರ್. ಅಂಬೇಡ್ಕರ್ ವೃತ್ತಕ್ಕೆ ತೆರಳಿ, ಬುದ್ಧ, ಬಸವ ಮತ್ತು ಅಂಬೇಡ್ಕರರ



ನಾಮಫಲಕಗಳಿಗೆ ಪುಷ್ಪನಮನ ಸಲ್ಲಿಸಿದರು. ಬಸವೇಶ್ವರ ನಗರದ ನಾಮಫಲಕಕ್ಕೂ ಗೌರವ ನಮನ ಸಲ್ಲಿಸುವ ಮೂಲಕ ಸಮಾನತೆ, ಮಾನವತೆ ಮತ್ತು ನ್ಯಾಯದ ಮೌಲ್ಯಗಳನ್ನು ನೆನಪಿಸಿದರು.ಈ ಕ್ಷಣಗಳು ಕೇವಲ ಆಚರಣೆಯಲ್ಲ, ಒಂದು ಚಿಂತನೆಯ ಯಾತ್ರೆಯಂತೆ ಅನುಭವವಾಗಿದ್ದವು.

ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿ ಪಟ್ಟಣ ಪಂಚಾಯ್ತಿ ಕಾರ್ಯಾಲಯದಲ್ಲಿ ಬೃಹತ್ ಕೇಕ್ ಕತ್ತರಿಸಲಾಯಿತು. ಕೇಕ್ ಕತ್ತರಿಸುವ ಕ್ಷಣದಲ್ಲಿ ಕರತಾಡನಗಳ ಗುಡುಗು ಮೊಳಗಿದರೆ, ಅಲ್ಲಿದ್ದ ಪ್ರತಿಯೊಬ್ಬರ ಮುಖದಲ್ಲೂ ಸಂತಸದ ಮಿಂಚು ಕಾಣಿಸಿತು. ನಂತರ ಸರ್ವರಿಗೂ ಕೇಕ್ ಹಂಚುವ ಮೂಲಕ ಜಯಂತಿಯನ್ನು ಹಬ್ಬದ ಸಿಹಿತನದಿಂದ ತುಂಬಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಅಧ್ಯಕ್ಷ ಶಿವಕುಮಾರ ನಾಯಕ ಅವರು, "ಅಂಬೇಡ್ಕರ್ ಕೇವಲ ವ್ಯಕ್ತಿಯಲ್ಲ, ಒಂದು ಶಕ್ತಿ. ಅವರ ಆದರ್ಶಗಳು ಸಮಾಜದ ಪ್ರತಿಯೊಂದು ಹಂತದಲ್ಲೂ ಬೆಳಕು





ಚೆಲ್ಲುತ್ತಿವೆ" ಎಂದು ಹೇಳಿದರು. ಉಪಾಧ್ಯಕ್ಷ ಹುಸೇನ್ ಭಾಷಾ ಬೂದಗುಂಪ ಅವರು "ಸಮಾನತೆ ಮತ್ತು ನ್ಯಾಯಕ್ಕಾಗಿ ಅಂಬೇಡ್ಕರ್ ಹೋರಾಟ ನಮ್ಮೆಲ್ಲರಿಗೂ ದಾರಿದೀಪ" ಎಂದು ಅಭಿಪ್ರಾಯಪಟ್ಟರು.

ಮಾಜಿ ಅಧ್ಯಕ್ಷ ಬಿ,ತಿಕ್ಕಯ್ಯರವರು ಅಂಬೇಡ್ಕರರ ಜೀವನ ಹೋರಾಟವನ್ನು ಸ್ಮರಿಸಿ, "ಅವರು ಅವಮಾನಗಳ ಮಧ್ಯೆಯೇ ಸಂವಿಧಾನದ ಮಹಾಶಿಲ್ಪಿಯಾಗಿ ಹೊರಹೊಮ್ಮಿದ ಮಹಾನ್ ವ್ಯಕ್ತಿ" ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಹಿರಿಯ ಸದಸ್ಯರಾದ ಹನುಮೇಶ ಹೂಗಾರ್, ಮಂಜುನಾಥ ಸ್ವಾಮಿ, ಬಸವರಾಜ ಸ್ವಾಮಿ ಗುಣಾರಿ, ಹುಸೇನಪ್ಪ, ಹಿರಿಯ ಮುಖಂಡರಾದ ತಿಕ್ಕಯ್ಯ,ಬಿ. ಮಹಾಬಳೇಶ್ವರ ಹಡಪದ, ಗಣೇಶ ಡಿಶ್, ಸುರೇಶ ಡಿ.ಎಸ್.ಎಸ್.ಇಸ್ಮಾಯಿಲ್ ಸಾಬ್ ಚೌದರಿ, ಯಂಕಪ್ಪ ನಾಯಕ,ರಿಯಾಜ್ ನಾಯ್ಕ, ಮಾಜಿ ಸದಸ್ಯ ರಾಜಶೇಖರ ಶಂಕ್ರಬಂಡಿ, ಮುಖಂಡರಾದ ಸಂತೋಷ ಅಂಬ್ಲಿ, ಅಮರೇಶ ಗಚ್ಚಿನಮನಿ,ಆರಕ್ಷಕ ರೇವಣಸಿದ್ದಪ್ಪ, ಆಲಮ್ ಭಾಷ ಹಣಿಗಿ, ವೀರೇಶ ಸ್ವಾಮಿ ಗುಣಾರಿ,ವಿಶ್ವನಾಥ ಶಿಕ್ಷಕರು,ಮೌನೇಶ ಡಿ,ಎಸ್,ಎಸ್,

ಸಂಜಯಕುಮಾರ ಜೈನ್,ಮೂಕಪ್ಪ ನಾಯಕ, ರಾಘವೇಂದ್ರ ಯಾದವ್ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಿದ್ದರು. ಇದಲ್ಲದೆ ಪೌರಕಾರ್ಮಿಕರು,ಸಿಬ್ಬಂದಿ ವರ್ಗ, ಹೋರಾಟಗಾರರು ಮತ್ತು ನಾಗರಿಕರು ದೊಡ್ಡ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮಕ್ಕೆ ವಿಶೇಷ

## ನೇಮಕಾತಿ ಪ್ರಕಟಣೆ

ALIMCO ನೇಮಕಾತಿ 2026–162 ಜೂನಿಯರ್ ಮ್ಯಾನೇಜರ್, ಆಫೀಸರ್ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಏಪ್ರಿಲ್ 15, 2026 ALIMCO ನೇಮಕಾತಿ 2026: 162 ಜೂನಿಯರ್ ಮ್ಯಾನೇಜರ್, ಆಫೀಸರ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಆರ್ಟಿಫಿಶಿಯಲ್ ಲಿಂಬ್ಸ್ ಮ್ಯಾನುಫ್ಯಾಕ್ಚರಿಂಗ್ ಕಾರ್ಪೊರೇಷನ್ ಆಫ್ ಇಂಡಿಯಾ ಜೂನಿಯರ್ ಮ್ಯಾನೇಜರ್, ಆಫೀಸರ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಏಪ್ರಿಲ್ 2026 ರ ALIMCO ಅಧಿಕೃತ ಅಧಿಸೂಚನೆಯ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅಖಿಲ ಭಾರತ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 13–ಮೇ–2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 14–04–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 13–ಮೇ–2026 ಅಧಿಕೃತ ವೆಬ್‌ಸೈಟ್: alimco.in

# ಬಸವ ಜಯಂತಿ ಅದ್ದೂರಿ ಆಚರಣೆಗೆ ನಿರ್ಧಾರ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಕರ್ನಾಟಕ ಸಂಸ್ಕೃತಿಕ ನಾಯಕ ಬಸವಣ್ಣನವರ ಜಯಂತಿಯನ್ನು ತಾಲೂಕ ಆಡಳಿತದ ವತಿಯಿಂದ ಏಪ್ರಿಲ್ 20 ರಂದು ಅರ್ಥಪೂರ್ಣ ಹಾಗೂ ಅದ್ದೂರಿಯಾಗಿ ಆಚರಿಸಲು ನಿರ್ಧರಿಸಲಾಗಿದೆ ಇದಕ್ಕೆ ಎಲ್ಲರೂ ಸಹಕರಿಸಿ ಎಂದು ತಹಶೀಲ್ದಾರ್ ಡಾ.ವಿನಯಾ ಹೂಗಾರ ಹೇಳಿದರು.**

ಬುಧವಾರ ಪಟ್ಟಣದ ತಹಶೀಲ್ದಾರ್ ಕಾರ್ಯಾಲಯದ ಸಭಾಂಗಣದಲ್ಲಿ ತಾಲೂಕ ಆಡಳಿತ ವತಿಯಿಂದ ಆಯೋಜಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. 12ನೇ ಶತಮಾನದಲ್ಲಿ ಸಮಾನತೆಯ ಕ್ರಾಂತಿಯನ್ನು ತಂದ ವಿಶ್ವಗುರು ಅಣ್ಣ ಬಸವಣ್ಣನವರ ಜಯಂತಿಯನ್ನು ಅತ್ಯಂತ ಸಂಭ್ರಮ ಹಾಗೂ ವಿಜೃಂಭಣೆಯಿಂದ ಆಚರಿಸಲಾಗುವುದು. ಏಪ್ರಿಲ್ 20 ರಂದು ಮುಂಜಾನೆ 8:30 ಘಂಟೆಗೆ ರಾಜವಾಡೆಯಿಂದ ಶ್ರೀ ಬಸವೇಶ್ವರರ ಭಾವಚಿತ್ರದ ಭವ್ಯ ಮೆರವಣಿಗೆ ಆರಂಭಿಸಲಾಗುವುದು.



ಮೆರವಣಿಗೆ ಸಕಲ ವಾದ್ಯ ಮೇಳಗಳೊಂದಿಗೆ ಪಟ್ಟಣದ ಕತ್ರಿ ಬಜಾರ್, ಶಿವಾಜಿ ಸರ್ಕಲ್, ಮಹಾರಾಣಾ ಪ್ರತಾಪ್ ಸಿಂಹ ಸರ್ಕಲ್ ದಿಂದ ಬಸ್ ನಿಲ್ದಾಣದ ಮಾರ್ಗವಾಗಿ ಶ್ರೀ ಬಸವೇಶ್ವರ ವೃತ್ತಕ್ಕೆ ತಲುಪುವುದು. ನಂತರ ಅಲ್ಲಿಯೇ ವೇದಿಕೆ ಕಾರ್ಯಕ್ರಮ ಜರಗುವುದು. ಜಯಂತಿಯನ್ನು ಸರ್ಕಾರದ ಶಿಷ್ಟಾಚಾರದಂತೆ ಆಮಂತ್ರಣ ಪತ್ರಿಕೆ ಮುದ್ರಿಸಿ ಗಣ್ಯರನ್ನು ಆಹ್ವಾನಿಸಲಾಗುವುದು. ಪಟ್ಟಣದ ಪ್ರಮುಖ ವೃತ್ತಗಳನ್ನು ಅಲಂಕರಿಸಲಾಗುವುದು ಅಣ್ಣ ಬಸವಣ್ಣನವರ ತತ್ವಾದರ್ಶಗಳನ್ನು ಇಂದಿನ ಯುವ ಪೀಳಿಗೆಗೆ ತಿಳಿಸಲು ಉಪನ್ಯಾಸ ಆಯೋಜಿಸಲಾಗುವುದು. ಎಲ್ಲ ಕಾರ್ಯಕ್ರಮಗಳು ಶಾಂತಿಯುತವಾಗಿ ನಡೆಯುವಂತಾಗಲು ಪೊಲೀಸ್ ಇಲಾಖೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದರು.

ಶ್ರೀ ಬಸವೇಶ್ವರ ಉತ್ಸವ ಸಮಿತಿ ಅಧ್ಯಕ್ಷ ಮಹಾಂತೇಶ ಮುರಾಳ ಮಾತನಾಡಿ ಸಮಾನತೆಯ ಹರಿಕಾರರಾದ ವಿಶ್ವಗುರು ಬಸವಣ್ಣನವರ 893ನೇ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲು ತಾಲೂಕ ಆಡಳಿತ ತೆಗೆದುಕೊಳ್ಳುವ ಎಲ್ಲ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಲು ಸಮಾಜ ಬಾಂಧವರು ಸಂಪೂರ್ಣ ಸಹಕಾರ ನೀಡಲಿದ್ದಾರೆ ಕಾರ್ಯಕ್ರಮದಲ್ಲಿ ಯಾವುದೇ ರೀತಿಯ ಲೋಪ ಆಗದಂತೆ ನೋಡಿಕೊಳ್ಳಬೇಕು. ಮೆರವಣಿಗೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಮಾಜ ಬಾಂಧವರನ್ನು ಸೇರಿಸಲು ಪ್ರಯತ್ನಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಗಣ್ಯರಾದ ಕಾಶಿನಾಥ ಮುರಾಳ, ಎಂ.ಎಸ್.ಸರಶಟ್ಟಿ,ಜಿ.ಜಿ. ಶರಣಗೌಡ ಪಾಟೀಲ,ಗಂಗಾಧರ ಕಸ್ತೂರಿ, ತಿಪ್ಪಣ್ಣ ಸಜ್ಜನ, ಪರಶುರಾಮ ತಂಗಡಗಿ, ರಾಜು ಸಜ್ಜನ, ಅಶೋಕ ಚಿನಗುಡಿ, ಎಂ. ಎಸ್. ನಾಗರಾಳ, ನಿಂಗಣ್ಣ ಕುಂಟೋಜಿ, ರವಿ ಚಂದುಕರ, ದತ್ತು ಉಬಾಳೆ,ಎಸ್.ಎಂ.ಪಾಲ್ಕಿ, ಲಂಕೇಶ ಪಾಟೀಲ, ಕ್ಷೇತ್ರ ಸಮನ್ವಯಾಧಿಕಾರಿ ಆರ್.ಬಿ.ದಮ್ಮೂರಮಠ, ಪಿಎಸ್‌ಐ ಎಸ್. ಎಂ.ಪಡಶೆಟ್ಟಿ, ತಾಪಂ ಸಹಾಯಕ ನಿರ್ದೇಶಕಿ ಸುಜಾತ ಯಡ್ರಾಮಿ, ಪುರಸಭೆ ಕಂದಾಯ ನಿರೀಕ್ಷಕ ಸುರೇಶ ಅಮರಣ್ಣವರ ಹಾಗೂ ವಿವಿಧ ಇಲಾಖೆಗಳ ತಾಲೂಕ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ದಶಕಗಳ ಬಳಿಕ ಲೆಬನಾನ್–ಇಸ್ರೇಲ್ ನಡುವೆ ನೇರ ಮಾತುಕತೆ

ನೈಜ್ಯ ದೆಸೆ ನ್ಯೂಸ್

**ವಾಷಿಂಗ್ಟನ್: ಲೆಬನಾನ್ ಮತ್ತು ಇಸ್ರೇಲ್ ದಶಕಗಳ ನಂತರ ಮೊದಲ ಬಾರಿಗೆ ವಾಷಿಂಗ್ಟನ್‌ನಲ್ಲಿ ನೇರ ರಾಜತಾಂತ್ರಿಕ ಮಾತುಕತೆಗಳನ್ನು ನಡೆಸಿವೆ. ಇಸ್ರೇಲ್ ಮತ್ತು ಇರಾನ್ ಬೆಂಬಲಿತ ಹಿಜ್ಬುಲ್ಲಾ ನಡುವೆ ನಡೆದ ಒಂದು ತಿಂಗಳಿಗಿಂತ ಹೆಚ್ಚು ಕಾಲದ ಯುದ್ಧದ ನಂತರ ಈ ಮಾತುಕತೆಗಳು ನಡೆದಿವೆ.**



ಅಮೆರಿಕದ ವಿದೇಶಾಂಗ ಕಾರ್ಯ ದರ್ಶಿ ಮಾರ್ಕೊ ರುಬಿ ಯೊ ಈ ಸಭೆಯನ್ನು ಐತಿಹಾಸಿಕ ಅವಕಾಶ ಎಂದು ಕರೆಯುತ್ತಾ, ತಕ್ಷಣವೇ ಯಾವುದೇ ಮಹತ್ವದ ಒಪ್ಪಂದವಾಗುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಸುಮಾರು ಎರಡು ಗಂಟೆಗಳ ಚರ್ಚೆಯ ನಂತರ ಬಿಡುಗಡೆಗೊಂಡ ಹೇಳಿಕೆಯಲ್ಲಿ, ಅಮೆರಿಕದ ವಿದೇಶಾಂಗ ಇಲಾಖೆ ಇಸ್ರೇಲ್ ಮತ್ತು ಲೆಬನಾನ್ ನಡುವೆ ನೇರ ಮಾತುಕತೆಗಳನ್ನು ಪ್ರಾರಂಭಿಸಲು ಸಹಾಯಕವಾಗುವ ಕ್ರಮಗಳ ಬಗ್ಗೆ ಫಲಪ್ರದ ಚರ್ಚೆಗಳು ನಡೆದಿವೆ ಎಂದು ತಿಳಿಸಿದೆ. ಹಿಜ್ಬುಲ್ಲಾ ಈ ನೇರ ಮಾತುಕತೆಗಳಿಗೆ ವಿರೋಧ ವ್ಯಕ್ತಪಡಿಸಿದ್ದು, ಸಭೆ ಆರಂಭವಾಗುತ್ತಿದ್ದಂತೆ ಉತ್ತರ ಇಸ್ರೇಲ್ ಮೇಲೆ ದಾಳಿಗಳನ್ನು ಹೆಚ್ಚಿಸಿದಂತೆ ಕಾಣಿಸಿಕೊಂಡಿದೆ.ಯುದ್ಧ ವಿರಾಮದ ಯಾವುದೇ ಒಪ್ಪಂದವು ಅಮೆರಿಕ ಮಧ್ಯಸ್ಥಿಕೆಯಲ್ಲಿ ಈ ಎರಡು ಸರ್ಕಾರಗಳ ನಡುವೆಯೇ ಆಗಬೇಕು, ಬೇರೆ ಯಾವುದೇ ಮಾರ್ಗದಿಂದ ಅಲ್ಲ, ಎಂದು ವಿದೇಶಾಂಗ ಇಲಾಖೆ ತಿಳಿಸಿದೆ. ಅಮೆರಿಕದಲ್ಲಿನ ಇಸ್ರೇಲ್ ರಾಯಭಾರಿ ಯೆಚಿಯೆಲ್ ಲೈಟರ್‌ಅವರು ಲೆಬನಾನ್‌ನಲ್ಲಿ ಹಿಜ್ಬುಲ್ಲಾ ಪ್ರಭಾವವನ್ನು ಕಡಿಮೆ ಮಾಡುವ ಬಗ್ಗೆ ಸಾಮಾನ್ಯ ಅಭಿಪ್ರಾಯ ಮೂಡಿದೆ ಎಂದು ಹೇಳಿ, ಚರ್ಚೆಯನ್ನು ಉತ್ತಮ ವಿನಿಮಯ ಎಂದು ವರ್ಣಿಸಿದರು.ಇತ್ತ ಅಮೆರಿಕದಲ್ಲಿನ ಲೆಬನಾನ್ ರಾಯಭಾರಿ ನಡಾ ಹಮಾದೆ ಮೊವಾಡ್, ಇಸ್ರೇಲ್‌ಹಿಜ್ಬುಲ್ಲಾ ಸಂಘರ್ಷವನ್ನು ತಕ್ಷಣ ಕೊನೆಗೊಳಿಸುವ ಅಗತ್ಯವಿದೆ ಎಂದು ಪುನರುಚ್ಚರಿಸಿದರು. ಅವರು ಪ್ರಾದೇಶಿಕ ಅಖಂಡತೆ, ಸಂಪೂರ್ಣ ರಾಜ್ಯ ಸರ್ವಾಧಿಕಾರ, ಯುದ್ಧ ವಿರಾಮ, ಸ್ಥಳಾಂತರಿತರ ಪುನರ್ವಸತಿ ಮತ್ತು ಮಾನವೀಯ ಸಂಕಷ್ಟ ನಿವಾರಣೆಗೆ ಸ್ಪಷ್ಟ ಕ್ರಮಗಳನ್ನು ಒತ್ತಾಯಿಸಿದರು. ಹಿಜ್ಬುಲ್ಲಾ ವಿರೋಧ ವ್ಯಕ್ತಪಡಿಸಿದರೂ, 1948ರಲ್ಲಿ ಇಸ್ರೇಲ್ ಸ್ಥಾಪನೆಯ ನಂತರದಿಂದ ಅಧಿಕೃತವಾಗಿ ಯುದ್ಧದಲ್ಲಿರುವ ಮತ್ತು ರಾಜತಾಂತ್ರಿಕ ಸಂಬಂಧಗಳಿಲ್ಲದ ಈ ಎರಡು ರಾಷ್ಟ್ರಗಳ ನಡುವೆ ನಡೆದ ಈ ಮಾತುಕತೆ ಮಹತ್ವದ ಹೆಜ್ಜೆಯಾಗಿದೆ.ಇತ್ತೀಚಿನ ಸಂಘರ್ಷವು ಮಾರ್ಚ್ 2ರಂದು ಹಿಜ್ಬುಲ್ಲಾ ಉತ್ತರ ಇಸ್ರೇಲ್ ಮೇಲೆ ರಾಕೆಟ್ ದಾಳಿ ನಡೆಸಿದ ನಂತರ ಆರಂಭವಾಯಿತು. ಅದರ ಕೆಲವು ದಿನಗಳ ಮೊದಲು ಅಮೆರಿಕ ಮತ್ತು ಇಸ್ರೇಲ್, ಹಿಜ್ಬುಲ್ಲಾದ ಪ್ರಮುಖ ಮಿತ್ರ ರಾಷ್ಟ್ರವಾದ ಇರಾನ್ ಮೇಲೆ ದಾಳಿ ನಡೆಸಿದ್ದವು.

## ಆಯುಷ್ಮಾನ್ ಆರೋಗ್ಯ ಶಿಬಿರ ಹಾಗೂ ನೂರು ದಿನಗಳ ಕ್ಷಯರೋಗ ನಿರ್ಮೂಲನೆ ಅಭಿಯಾನ ಚಾಲನೆ



ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರ್ ಹಾಗೂ ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಿಂಧನೂರ್ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಹಾರಾಪುರ ಬೂತಲದಿನ್ನಿ ಉಪ ಕೇಂದ್ರದ ವ್ಯಾಪ್ತಿಗೆ ಬರುವ ಮಲ್ಲಾಪುರ್ ಗ್ರಾಮದಲ್ಲಿ ಆಯುಷ್ಮಾನ್ ಆರೋಗ್ಯ ಶಿಬಿರ ಕಾರ್ಯಕ್ರಮದ ಜೊತೆಗೆ ನೂರು ದಿನಗಳ ಕ್ಷಯರೋಗ ನಿರ್ಮೂಲನೆ ಅಭಿಯಾನವನ್ನು ಹಮ್ಮಿಕೊಳ್ಳಲಾಯಿತು.**

ಸದರಿ ಕಾರ್ಯಕ್ರಮದಲ್ಲಿ ಶ್ರೀಮತಿ ಗೀತಾ ಹಿರೇಮಠ್ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ತಾಲೂಕ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಿಂಧನೂರ್ ಇವರು ಮಾತನಾಡಿ ಭಾರತ ಸರ್ಕಾರವು ಕ್ಷಯ ರೋಗವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವ ಗುರಿಯೊಂದಿಗೆ "100 ದಿನಗಳ ತೀವ್ರ ಕ್ಷಯ ರೋಗ ಅಭಿಯಾನ" ಕಾರ್ಯಕ್ರಮವನ್ನು ಪ್ರಾರಂಭಿಸಿದೆ. ಈ ಅಭಿಯಾನದ ಪ್ರಮುಖ ಅಂಶಗಳು ಪ್ರಾರಂಭದ ದಿನಾಂಕ ಮಾರ್ಚ್ 24 2026 ಅವಧಿ 100 ದಿನಗಳ ಕಾಲ ದೇಶಾದ್ಯಂತ ವಿಶೇಷವಾಗಿ 347ಕ್ಕೂ ಹೆಚ್ಚು ಅತಿ ಹೆಚ್ಚು ಸಂಕಿತ ಜಿಲ್ಲೆಗಳಲ್ಲಿ ಟಿಬಿ ಪ್ರಕರಣಗಳನ್ನು ಶೀಘ್ರವಾಗಿ ಪತ್ತೆ ಹಚ್ಚುವುದು ರೋಗ ನಿರ್ಣಯದ ವಿಳಂಬವನ್ನು ಕಡಿಮೆ ಮಾಡುವುದು ಮತ್ತು ಚಿಕಿತ್ಸೆಯನ್ನು ಸುಧಾರಿಸುವುದು ಪ್ರಮುಖ ಕಾರ್ಯಕ್ರಮಗಳು ಸಕ್ರಿಯ ಪ್ರಕರಣ ಪತ್ತೆ ಆರೋಗ್ಯ ಕಾರ್ಯಕರ್ತರು ನೇರವಾಗಿ ಮನೆ ಮನೆಗೆ ಭೇಟಿ ನೀಡಿ ಟಿಬಿ ಲಕ್ಷಣಗಳಿರುವವರನ್ನು ಪರೀಕ್ಷಿಸುತ್ತಾರೆ ಉಚಿತ ತಪಾಸಣೆ ಎಕ್ಸರೇ ಮತ್ತು ಕಫ ಪರೀಕ್ಷೆಗಳು ಆಯೋಜಿಸಲಾಗಿದೆ.

ನಿಕ್ಷಯ ಪೋಷಣ ಯೋಜನೆ ಟಿಬಿ ರೋಗಿಗಳಿಗೆ ಪೌಷ್ಟಿಕ ಆಹಾರಕ್ಕಾಗಿ ನೀಡುವ ಮಾಸಿಕ ಆರ್ಥಿಕ ಸಹಾಯವನ್ನು 500 ರಿಂದ 1000 ಕ್ಕೆ ಹೆಚ್ಚಿಸಲಾಗಿದೆ ನಿಕ್ಷಯ ಮಿತ್ರ ಯೋಜನೆ ಟಿವಿ ಇರೋ ರೋಗಿಗಳಿಗೆ ಪೌಷ್ಟಿಕಾಂಶದ ಬೆಂಬಲ ನೀಡಲು ಸಾರ್ವಜನಿಕರು ಮತ್ತು ಸಂಸ್ಥೆಗಳನ್ನು ಪ್ರೋತ್ಸಾಹಿಸುವುದು ಈ ಅಭಿಯಾನವು ಮುಖ್ಯವಾಗಿ ಶರೋಗಿಗಳ ಚಿಕಿತ್ಸೆ, ಪೂರ್ಣಗೊಳಿಸುವುದು ಮತ್ತು ಸಮಾಜದಲ್ಲಿ ಟಿವಿ ಬಗ್ಗೆ ಇರುವ ಕಳಂಕವನ್ನು ಹೋಗಲಾಡಿಸುವ ಗುರಿಯನ್ನು ಹೊಂದಿದೆ ಸದರಿ ಕಾರ್ಯಕ್ರಮದಲ್ಲಿ ಶ್ರೀ ಸುರೇಶ್ ಎಸ್ ಟಿ ಎಸ್, ಶ್ರೀ ಅಮಿದ್ ಎಸ್ ಟಿ ಎಲ್ ಎಸ್ ಶ್ರೀ ಸಂಗಮೇಶ್ ಎಸ್ ಟಿ ಎಲ್ ಎಸ, ಶ್ರೀಮತಿ ಪ್ರೇಮ ಪಿ ಎಚ್ ಸಿ ಓ, ಶ್ರೀಮತಿ ದೀಪಿಕಾ ಸಿ ಎಚ್ ಓ, ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ನೀರಿನ ಪೂರೈಕೆಯಲ್ಲಿ ವೆತ್ಯಯವಾಗಬಾರದು: ಜಿಲ್ಲಾಧಿಕಾರಿ ಜಿ.ಪ್ರಭು

ನೈಜ್ಯ ದೆಸೆ ನ್ಯೂಸ್

**ಚಿಕ್ಕಬಳ್ಳಾಪುರ: ಕುಡಿಯುವ ನೀರಿನ ಪೂರೈಕೆಯಲ್ಲಿ ಯವುದೇ ಕಾರಣಕ್ಕೂ ಜಿಲ್ಲೆಯಲ್ಲಿ ವೆತ್ಯಯ ಆಗಬಾರದು ಎಂದು ಜಿಲ್ಲಾಧಿಕಾರಿ ಜಿ.ಪ್ರಭು ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.**

**ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಬುಧವಾರ ನಡೆದ "ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ"ಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.**

ಗ್ರಾಮಾಂತರ ಪ್ರದೇಶ ಹಾಗೂ ನಗರ ಪ್ರದೇಶದ ಯಾವುದೇ ಜನವಸತಿ ಪ್ರದೇಶದಲ್ಲಿ ಕುಡಿಯುವ ನೀರಿನ ಪೂರೈಕೆಯಲ್ಲಿ ಸಮಸ್ಯೆ ಕಂಡು ಬಂದರೆ ತುರ್ತು ಕ್ರಮವಾಗಿ ಕೂಡಲೆ "ಟ್ಯಾಂಕರ್ ಮೂಲಕ ನೀರಿನ ಪೂರೈಕೆ ಮಾಡಲು ಕ್ರಮ ವಹಿಸಬೇಕು. ಬೇಸಿಗೆಯ ತೀವ್ರತೆ ಹೆಚ್ಚುತ್ತಿದ್ದು, ಯಾವ ಕೊಳವೆ ಬಾವಿ ನೀರು ಯಾವ ಸಂದರ್ಭದಲ್ಲಿ ನಿಂತು ಹೋಗಲಿದೆ ಹೇಳಲಿಕ್ಕೆ ಆಗುವುದಿಲ್ಲ. ಆದ್ದರಿಂದ ಟ್ಯಾಂಕರ್ ಮೂಲಕವಾಗಲಿ ಅಥವಾ ಖಾಸಗಿ ಕೊಳವೆ ಬಾವಿ ಮೂಲಕ ನೀರು ಪೂರೈಸುವ ತಾತ್ಕಾಲಿಕ ವ್ಯವಸ್ಥೆ ಮಾಡಬೇಕು. ಆ ನಂತರ ಜಲಜೀವನ್ ಮಿಷನ್ ಯೋಜನೆಯಡಿ ಅಥವಾ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯಲ್ಲಿ ಅನುಮೋದನೆ ಪಡೆದುಕೊಂಡು ಕೊಳವೆ ಬಾವಿ ಕೊರೆದು ನೀರಿನ ಸಮಸ್ಯೆ ನೀಗಿಸಬೇಕು.



ಈ ನಿಟ್ಟಿನಲ್ಲಿ ತಾಲ್ಲೂಕು ಪಂಚಾಯ್ತಿಗಳ ಕಾರ್ಯನಿರ್ವಹಣಾಧಿಕಾರಿಗಳು, ನಗರಾಡಳಿತ ಸಂಸ್ಥೆಗಳ ಆಯುಕ್ತರು, ಮುಖ್ಯಾಧಿಕಾರಿಗಳು ಹಾಗೂ ತಾಲ್ಲೂಕು ತಹಸೀಲ್ದಾರರು ಹೆಚ್ಚಿನ ನಿಗಾವಹಿಸಿ ದಿನ ನಿತ್ಯದ ನೀರಿನ ಪೂರೈಕೆ ಬಗ್ಗೆ ಮಾಹಿತಿ ಪಡೆಯಬೇಕು ಎಂದರು. ಪ್ರಸ್ತುತ ಚಿಕ್ಕಬಳ್ಳಾಪುರ ತಾಲ್ಲೂಕಿನ ಕವರನಹಳ್ಳಿ, ಕಣಿತಹಳ್ಳಿ, ನಕ್ಕಲಹಳ್ಳಿ ಮತ್ತು ಮಧುರೇನಹಳ್ಳಿ. ಚಿಂತಾಮಣಿ ತಾಲ್ಲೂಕಿನ ಗೌಡನಹಳ್ಳಿ, ಶೆಟ್ಟಿಹಳ್ಳಿ, ಮಲ್ಕಪುರ ಮತ್ತು ಕೃಷ್ಣಮ್ಮನ ಹೊಸಹಳ್ಳಿ. ಬಾಗೇಪಲ್ಲಿ ತಾಲ್ಲೂಕಿನ ಚಾಮಲವಾರಿಪಲ್ಲಿ, ಯಲಗಲಪಲ್ಲಿ, ವೀರಾಪುರ, ಮಲ್ಲೆಪಲ್ಲಿ ಮತ್ತು ಗಂಗರೆಡ್ಡಿಪಲ್ಲಿ. ಶಿಡ್ಲಘಟ್ಟ ತಾಲ್ಲೂಕಿನ ವಲ್ಲಪ್ಪಹಳ್ಳಿ, ಚೀಮಂಗಲ, ಹೇಮಾರ್ಲಹಳ್ಳಿ, ಜಂಗಮಕೋಟೆ, ಭಕ್ತರಹಳ್ಳಿ, ಪಲಿಚೆರ್ಲು, ತದೂರು ಮತ್ತು ಮುಗಲಪಡಿ. ಗೌರಿಬಿದನೂರು ತಾಲ್ಲೂಕಿನ ಸಿದ್ದೇನಹಳ್ಳಿ. ಗುಡಿಬಂಡೆ ತಾಲ್ಲೂಕಿನ ಚಿನ್ನಹಳ್ಳಿ ಸೇರಿದಂತೆ ಒಟ್ಟು 23 ಗ್ರಾಮಗಳಿಗೆ ಕುಡಿಯುವ ನೀರನ್ನು ಖಾಸಗಿ ಕೊಳವೆ ಬಾವಿಗಳ ಮಾಲೀಕರ ಸಹಕಾರ ಪಡೆದು ನೀರು ಪೂರೈಸಲಾಗುತ್ತಿದೆ.

ಬಾಗೇಪಲ್ಲಿ ತಾಲ್ಲೂಕಿನ ಮಲ್ಲೆಪಲ್ಲಿ ಗ್ರಾಮಕ್ಕೆ ಟ್ಯಾಂಕರ್ ಮೂಲಕ ಪ್ರಸ್ತುತ ನೀರು ಸರಬರಾಜು ಮಾಡಲಾಗುತ್ತಿದೆ. ಕುಡಿಯುವ ನೀರಿನ ಸಮಸ್ಯೆ ತಲೆದೋರಬಹುದಾದ ಗ್ರಾಮಗಳನ್ನು ಮುನ್ನೆಚ್ಚರಿಕೆಯಾಗಿ ಗುರ್ತಿಸಲು ನಿರಂತರ ನಿಗಾ ಇಡಲು ಕಾರ್ಯನಿರ್ವಾಹಣಾಧಿಕಾರಿಗಳಿಗೆ ಸೂಚಿಸಿದರು. ಇನ್ನೂ ನಗರ ಪ್ರದೇಶ ವ್ಯಾಪ್ತಿಯಲ್ಲಿ ಗೌರಿಬಿದನೂರು ನಗರದ 4 ವಾರ್ಡ್ ಗಳು, ಶಿಡ್ಲಘಟ್ಟ ನಗರದ 6 ವಾರ್ಡ್ ಗಳು, ಚಿಂತಾಮಣಿಯ 4 ವಾರ್ಡ್ ಗಳು ಹಾಗೂ ಬಾಗೇಪಲ್ಲಿಯ 4 ವಾರ್ಡ್ ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿದ್ದು, ಸದ್ಯಕ್ಕೆ ಖಾಸಗಿ ಕೊಳವೆ ಬಾವಿಗಳ ಮೂಲಕ ನೀರು ಪೂರೈಸಲಾಗುತ್ತಿದೆ. ನಗರ ಪ್ರದೇಶ ವ್ಯಾಪ್ತಿಯಲ್ಲಿ ಈ ವರೆಗೆ ಟ್ಯಾಂಕರ್ ಮೂಲಕ ನೀರು ಪೂರೈಸುವ ಪರಿಸ್ಥಿತಿ ಎದುರಾಗಿಲ್ಲ ಎಂದು ತಿಳಿಸಿದರು.


ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ವೈ.ನವೀನ್ ಭಟ್, ಉಪವಿಭಾಗಾಧಿಕಾರಿ ಡಿ.ಹೆಚ್.ಅಶ್ವಿನ್, ಶಿಡ್ಲಘಟ್ಟದ ತಹಶೀಲ್ದಾರ್ ಎನ್. ಗಗನಸಿಂಧು, ಸೇರಿದಂತೆ ಎಲ್ಲಾ ತಾಲ್ಲೂಕುಗಳ ತಹಸೀಲ್ದಾರರು, ತಾಲ್ಲೂಕು ಪಂಚಾಯ್ತಿ ಕಾರ್ಯನಿರ್ವಾಹಣಾಧಿಕಾರಿಗಳು, ನಗರಾಡಳಿತ ಸಂಸ್ಥೆಗಳ ಆಯುಕ್ತರು, ಮುಖ್ಯಾಧಿಕಾರಿಗಳು ಹಾಜರಿದ್ದರು.

# ಕನ್ನಡ ಮಾಧ್ಯಮ ವಿದ್ಯಾರ್ಥಿಗಳ ಸಮಸ್ಯೆ ಪರಿಹರಿಸಲು ಸರ್ಕಾರಕ್ಕೆ ಕನ್ನಡ ಸ್ಥಿತಿಗತಿಯನ್ನು ತನಿಖೆ ವರದಿ ಸಲ್ಲಿಸಲು ಪ್ರಮಾಣಿಕ ಪ್ರಯತ್ನ ಮಾಡುವೆ: ಶಿವಾನಂದ ಕರಾಳೆ

ನೈಜ್ಯ ದೆಸೆ ನ್ಯೂಸ್

**ಬೀದರ: ಗಡಿನಾಡು ಹಾಗೂ ಹೊರನಾಡು ಪ್ರದೇಶಗಳಲ್ಲಿ ತೆಲಗಾಂಣ ರಾಜ್ಯದಲ್ಲಿ ಕನ್ನಡ ಮಾಧ್ಯಮ ಓದುತ್ತಿರುವ ವಿದ್ಯಾರ್ಥಿಗಳಿಗೆ ಕರ್ನಾಟಕ ಸರ್ಕಾರದಿಂದ ಸಿಗುವ ಮೂಲ ಸೌಕರ್ಯವನ್ನು ಒದಗಿಸಲು ಕಾನೂನು ಪ್ರಕಾರ ಪರಿಶೀಲನೆ ನಡೆಸಿ ಸರ್ಕಾರಕ್ಕೆ ಕನ್ನಡಿಗರ ಜೀವನ ಮತ್ತು ಕನ್ನಡ ಸ್ಥಿತಿಗತಿಯನ್ನು ಜಿಲ್ಲಾಡಳಿತ ವತಿಯಿಂದ ವರದಿ ಸಲ್ಲಿಸಲು ಪ್ರಮಾಣಿಕ ಪ್ರಯತ್ನ ಮಾಡುವೆ ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆಯವರು ತೆಲಗಾಂಣ ರಾಜ್ಯದ ಕನ್ನಡ ಸಂಘಟನೆಗಳಾದ ಓಂ ಸಾಯಿ ರೂರಲ್ ಡೆವಲಮೆಂಟ್ ಸೂಸೈಟಿ (ರಿ) ಹಾಗೂ ಕನ್ನಡಿಗರ ಕಲ್ಯಾಣ ಅಭಿವೃದ್ಧಿ ಸಂಘ ಹೈದ್ರಾಬಾದ (ರಿ) ಅವರ ಮನವಿಗೆ ಶಿಫಾರಸ್ಸು ಮಾಡುವುದಾಗಿ ಭರವಸೆ ನೀಡಿದರು.**

ಅವರು ಅಪರ ಜಿಲ್ಲಾಧಿಕಾರಿ ಕಚೇರಿಯಲ್ಲಿ ಮನವಿ ಸ್ವೀಕರಿಸಿ ಭರವಸೆ ನೀಡಿದರು.



ಈ ಸಮಸ್ಯೆಗಳನ್ನು ಜಿಲ್ಲಾಧಿಕಾರಿಗಳ ಗಮನಕ್ಕೆ ತಂದು ಪ್ರಯತ್ನಿಸಲಾಗುವುದು ಎಂದರು . ಲಕ್ಷಾಂತರ ಸಂಖ್ಯೆಯಲ್ಲಿ ಕನ್ನಡ ಭಾಷಿಕರು ಹಲವು ದಶಕಗಳಿಂದ ನೆಲೆಸಿದ್ದು, ತಮ್ಮ ಕನ್ನಡ ಭಾಷೆ, ಸಂಸ್ಕೃತಿ ಮತ್ತು ಅಸ್ತಿತ್ವವನ್ನು ಕಾಪಾಡಿಕೊಳ್ಳಲು ನಿರಂತರ ಹೋರಾಟ ನಡೆಸುತ್ತಿದ್ದಾರೆ. ಆದಾಗ್ಯೂ ಇಂದಿಗೂ ಈ ಭಾಗದ ಕನ್ನಡಿಗರು ಶಿಕ್ಷಣ, ಉದ್ಯೋಗ ಹಾಗೂ ಆಡಳಿತಾತ್ಮಕ ಸೌಲಭ್ಯಗಳ ಕೊರತೆ ಸೇರಿದಂತೆ ಹಲವು ಗಂಭೀರ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಈ ನಿಟ್ಟಿನಲ್ಲಿ ತಮ್ಮ ಅಧ್ಯಕ್ಷತೆಯಲ್ಲಿ ಅಧಿಕಾರಿಗಳ ಸಭೆ ನಡೆಸಿ ನಿಖರವಾದ ಮಾಹಿತಿ ಸಂಗ್ರಹಿಸಿ ಕರ್ನಾಟಕ ಸರ್ಕಾರ ಗಮನಕ್ಕೆ ತರಬೇಕು ಎಂದು ಮನವಿ ಪತ್ರದಲ್ಲಿ ಒತ್ತಾಯಿಸಲಾಯಿತು.

ತೆಲಗಾಂಣ ರಾಜ್ಯದ ಸಂಗಾರೆಡ್ಡಿ ಜಿಲ್ಲೆಯ ನಾರಾಯಣ ಖೇಡ ತಾಲೂಕಿನಲ್ಲಿರುವ ಕಾರಾಮುಂಗಿ, ಔಧತಪುರ, ಯಸಗಿ , ಗೌಡಗಾಂವ, ಶಹಾಪೂರ,ಮೂರ್ಗಿ,ಶಿಖರಖಾನ್,ಗೂಂಡೆಗಾಂವ, ರತ್ನಾಪೂರ, ಮಂಗಲಗಿ, ಮೈನಳ್ಳಿ, ಹೀಗೆ ಅನೇಕ ಗ್ರಾಮಗಳಲ್ಲಿ ಕನ್ನಡ ಶಾಲೆಗಳು ಜೀವಂತವಾಗಿವೆ ಈ ಕನ್ನಡ ಶಾಲೆಗಳನ್ನು ಉಳಿಸುವ ಪ್ರಯತ್ನ ಕರ್ನಾಟಕ ಸರ್ಕಾರ ಮಾಡಬೇಕೆಂದು ಇಂದು ಭೇಟಿ ಮಾಡಿದ ನಿಯೋಗ ಮನವಿ ಮಾಡಿತು. ಉನ್ನತ ಶಿಕ್ಷಣದಲ್ಲಿ ಕನ್ನಡಿಗರಿಗೆ ಸಿಗುವ ಅವಕಾಶಗಳ ಕೊರತೆ, ಗಡಿನಾಡ ಕನ್ನಡಿಗರಿಗೆ ನ್ಯಾಯಸಮ್ಮತ ಉದ್ಯೋಗಾವಕಾಶಗಳ ಲಭ್ಯತೆ ಕಡಿಮೆ ಇರುವುದರಿಂದ ಹಾಗೂ ಸಾಂವಿಧಾನಿಕವಾಗಿ ಸಾರ್ವಜನಿಕ ಸೇವೆಗಳನ್ನು ಪಡೆಯುವಲ್ಲಿ ಯುವಜನತೆಗೆ ಭವಿಷ್ಯದ ಬಗ್ಗೆ ಅನಿಶ್ಚಿತತೆ ಉಂಟಾಗಿದೆ ಇದನ್ನು ಸರಿಪಡಿಸಲು ಸರ್ಕಾರ ಶೀಘ್ರವೇ ಸಭೆ ನಡೆಸಿ ಕಾನೂನು ಕ್ರಮ ಕೈಗೊಳ್ಳಬೇಕೆಂದು ಸಂಘದವತಿಯಿಂದ ಮನವಿ ಮಾಡಲಾಯಿತು.

ಗಡಿನಾಡು/ಹೊರನಾಡು ವಿದ್ಯಾರ್ಥಿಗಳಿಗೆ ವಸತಿ ಶಾಲೆಗಳಲ್ಲಿ ಅವಕಾಶ, ಉನ್ನತ ವ್ಯಾಸಂಗಗಳಲ್ಲಿ ಅವಕಾಶ ಹಾಗೂ ಉದ್ಯೋಗಗಳಲ್ಲಿ ಅವಕಾಶ ಹಾಗೂ ಆದ್ಯತೆ ನೀಡುವಂತೆ ಹಾಗೂ ಈ ಕುರಿತು ಸೂಕ್ತ ನೀತಿಗಳನ್ನು ರೂಪಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡುವಂತೆ ಮನವಿ ಪತ್ರದಲ್ಲಿ ವಿನಂತಿಸಿಕೊಳ್ಳಲಾಯಿತು. ನಿಯೋಗದಲ್ಲಿ ಡಾ.ಜಗನ್ನಾಥ ಹೆಬ್ಬಾಳೆ, ಓಂ ಸಾಯಿ ರೂರಲ್ ಡೆವಲಮೆಂಟ್ ಸೂಸೈಟಿ ಅಧ್ಯಕ್ಷರಾದ ಶಿವಶರಣಪ್ಪ ಗಣೇಶಪೂರ್ ಮತ್ತು ಕನ್ನಡಿಗರ ಕಲ್ಯಾಣ ಅಭಿವೃದ್ಧಿ ಸಂಘ ಹೈದ್ರಾಬಾದ ಅಧ್ಯಕ್ಷರಾದ ಧರ್ಮೆಂದ್ರ ಪೂಜಾರಿ ಬಗದೂರಿ, ಡಾ, ರಾಜಕುಮಾರ ಹೆಬ್ಬಾಳೆ, ನಾಗಪ್ಪಾ ಸಾಮಾಜಿಕ ಸಾಂಸ್ಕೃತರಿಕ ಮತ್ತು ಸೇವಾ ಸಂಸ್ಥೆ ಅಧ್ಯಕ್ಷರಾದ ಭೀಮರಾವ ಬೀದರಕರ್, ಬಸವ ಬೆಳಕು ಸಂಪಾದಕರಾದ ರಾಜಕುಮಾರ

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಬಿ.ಟೆಕ್ ಮೆರೈನ್ ಎಂಜಿನಿಯರಿಂಗ್

ಬಿ.ಟೆಕ್ ಮೆರೈನ್ ಎಂಜಿನಿಯರಿಂಗ್ 4 ವರ್ಷಗಳ ಪದವಿಪೂರ್ವ ಎಂಜಿನಿಯರಿಂಗ್ ಕಾರ್ಯಕ್ರಮವಾಗಿದೆ. ಇದು ವಿದ್ಯಾರ್ಥಿಗಳಿಗೆ ಸಮುದ್ರ ಹಡಗುಗಳು ಮತ್ತು ಸಂಬಂಧಿತ ಉಪಕರಣಗಳು ಮತ್ತು ಯಂತ್ರೋಪಕರಣಗಳ ವಿನ್ಯಾಸ, ನಿರ್ಮಾಣ, ಕಾರ್ಯಾಚರಣೆ ಮತ್ತು ನಿರ್ವಹಣೆಯ ಅಡಿಪಾಯವನ್ನು ನೀಡುವ ಗುರಿಯನ್ನು ಹೊಂದಿದೆ. ಪಠ್ಯಕ್ರಮವು ಸಮುದ್ರ ತಂತ್ರಜ್ಞಾನದಲ್ಲಿ ಸೈದ್ಧಾಂತಿಕ ಜ್ಞಾನ ಮತ್ತು ಪ್ರಾಯೋಗಿಕ ಕೌಶಲ್ಯಗಳನ್ನು ನೀಡುತ್ತದೆ. ನೀವು ಅಧ್ಯಯನ ಮಾಡುವ ಕೆಲವು ಪ್ರಮುಖ ವಿಷಯಗಳೆಂದರೆ ಅನ್ವಯಿಕ ಉಷ್ಣಬಲ ವಿಜ್ಞಾನ, ಹಡಗು ನಿರ್ಮಾಣ, ಸಾಗರ ಸಹಾಯಕ ಯಂತ್ರಗಳು, ನೌಕಾ ವಾಸ್ತುಶಿಲ್ಪ, ಹಡಗು ಸುರಕ್ಷತೆ ಮತ್ತು ಪರಿಸರ ಸಂರಕ್ಷಣೆ, ಇತ್ಯಾದಿ. ಈ ಕೋರ್ಸ್‌ಗೆ ಅರ್ಹತೆ ಪಡೆಯಲು, ನೀವು ಮಾನ್ಯತೆ ಪಡೆದ ಮಂಡಳಿಯಿಂದ 12 ನೇ ತರಗತಿಯಲ್ಲಿ (PCM) ಕನಿಷ್ಠ 50–60% ಒಟ್ಟು ಅಂಕಗಳನ್ನು ಗಳಿಸಬೇಕು. ಕೆಲವು ಕಾಲೇಜುಗಳು ಇಂಗ್ಲಿಷ್‌ನಲ್ಲಿ ಕನಿಷ್ಠ 50% ಅಂಕಗಳನ್ನು ಬಯಸುತ್ತವೆ. ಈ ಕೋರ್ಸ್‌ಗೆ ಪ್ರವೇಶವು ಮೆರಿಟ್ ಆಧಾರಿತ ಅಥವಾ ಪ್ರವೇಶ ಆಧಾರಿತವಾಗಿರಬಹುದು. ಉನ್ನತ ಪ್ರವೇಶ ಪರೀಕ್ಷೆಗಳಲ್ಲಿ IMU CET, TMISAT ಮತ್ತು CUSAT CAT ಸೇರಿವೆ. ಭಾರತದಲ್ಲಿ ಮೆರೈನ್ ಎಂಜಿನಿಯರಿಂಗ್‌ನಲ್ಲಿ ಬಿ.ಟೆಕ್ ನೀಡುವ ಉನ್ನತ ಕಾಲೇಜುಗಳು ಸಿ. ವಿ. ರಾಮನ್ ಗ್ಲೋಬಲ್ ವಿಶ್ವವಿದ್ಯಾಲಯ, ಕೊಚ್ಚಿನ್ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯ, ಟೋಲಾನಿ ಮ್ಯಾರಿಟೈಮ್ ಸಂಸ್ಥೆ, ಇಂಡಿಯನ್ ಮ್ಯಾರಿಟೈಮ್ ವಿಶ್ವವಿದ್ಯಾಲಯ, ಸಮುಂದ್ರ ಇನ್‌ಸ್ಟಿಟ್ಯೂಟ್ ಆಫ್ ಮ್ಯಾರಿಟೈಮ್ ಸ್ಟಡೀಸ್. ಬಿ.ಟೆಕ್ ಮೆರೈನ್ ಎಂಜಿನಿಯರಿಂಗ್ ಪದವೀಧರರಾಗಿ, ನೀವು ಶಿಪ್ಪಿಂಗ್ ಮತ್ತು ಕಡಲ ಉದ್ಯಮದಲ್ಲಿ ವೃತ್ತಿಜೀವನವನ್ನು ಮಾಡಲು ಎದುರು ನೋಡಬಹುದು. ಕೆಲವು ಉನ್ನತ ಉದ್ಯೋಗ ಪ್ರೊಫೈಲ್‌ಗಳಲ್ಲಿ ಮೆರೈನ್ ಎಂಜಿನಿಯರ್, ಶಿಪ್ ಎಂಜಿನಿಯರ್, ಪೋರ್ಟ್ ಮ್ಯಾನೇಜರ್ ಇತ್ಯಾದಿ ಸೇರಿವೆ. ಹೆಚ್ಚಿನ ಬಿಟೆಕ್ ಮೆರೈನ್ ಎಂಜಿನಿಯರಿಂಗ್ ಕೋರ್ಸ್ ವಿವರಗಳಿಗಾಗಿ ಕೆಳಗೆ ಓದಿ

# ಸೇತುವೆ ಕಾಮಗಾರಿ ಪರಿಶೀಲಿಸಿದ ಶಾಸಕ ನಾಡಗೌಡ

ನೈಜ್ಯ ದೆಸೆ ನ್ಯೂಸ್





**ತಾಳಿಕೋಟಿ: ಪಟ್ಟಣದ ಹತ್ತಿರ ಹರಿದು ಹೋಗುವ ಡೋಣಿ ನದಿಗೆ ಹಾಗೂ ಮೂಕಿಹಾಳ ಗ್ರಾಮದ ಹತ್ತಿರ ಸೋಗಲಿ ಹಳ್ಳಕ್ಕೆ ಅಡ್ಡಲಾಗಿ ನಿರ್ಮಿಸಲಾಗುತ್ತಿರುವ ಸೇತುವೆಗಳ ಪ್ರಗತಿ ಹಂತದ ಕಾಮಗಾರಿಯನ್ನು ಕೆ ಎಸ್ ಡಿ ಎಲ್ ಅಧ್ಯಕ್ಷ, ಮುದ್ದೇಬಿಹಾಳ ಮತಕ್ಷೇತ್ರದ ಶಾಸಕರಾದ ಸಿ.ಎಸ್.ನಾಡಗೌಡ ಅಪ್ಪಾಜಿಯವರು ಪರಿಶೀಲಿಸಿದರು.**

ಮಂಗಳವಾರ ಕಾಮಗಾರಿ ನಡೆಯುತ್ತಿರುವ ಎರಡೂ ಸೇತುವೆಗಳ ಸ್ಥಳಗಳಿಗೆ ಭೇಟಿ ನೀಡಿದ ಶಾಸಕರು ಸ್ಥಳದಲ್ಲಿದ್ದ ಲೋಕೋಪಯೋಗಿ ಇಲಾಖೆಯ ಎಇಇ ರೆಡ್ಡಿ ಅವರಿಂದ ಕಾಮಗಾರಿಯ ಸಂಪೂರ್ಣ ಮಾಹಿತಿಯನ್ನು ಪಡೆದುಕೊಂಡರು. ಕಾಮಗಾರಿಗೆ ಬಳಸುತ್ತಿರುವ ಮರಳನ್ನು ಸ್ವತಃ ಪರಿಶೀಲಿಸಿದರು. ಯಾವ ಕಾರಣಕ್ಕೂ ಕಾಮಗಾರಿಯ ಗುಣಮಟ್ಟ ಕೆಡದಂತೆ ನೋಡಿಕೊಳ್ಳಬೇಕೆಂದು ಸ್ಪಷ್ಟ ಸೂಚನೆ ನೀಡಿದರು. ನಂತರ ಪತ್ರಿಕೆಯೊಂದಿಗೆ ಮಾತನಾಡಿದ ಅವರು ಡೋಣಿ ನದಿಗೆ ಅಡ್ಡಲಾಗಿ ನಿರ್ಮಿಸುತ್ತಿರುವ ಮುಖ್ಯ ಸೇತುವೆ ಅಂದಾಜು 30 ಕೋಟಿಯದ್ದಾಗಿದೆ ಇದು ಪೂರ್ಣಗೊಳ್ಳಲು ಇನ್ನಷ್ಟು ಸಮಯಾ ವಕಾಶದ ಅಗತ್ಯವಿದೆ ಆದ್ದರಿಂದ ತಾಳಿಕೋಟಿಯಿಂದ ಹಡಗಿನಾಳ ಮಾರ್ಗದ ಸೋಗಲಿ ಹಳ್ಳದ ಹತ್ತಿರ ನಿರ್ಮಾಣಗೊಳ್ಳುತ್ತಿರುವ ಕೆಳ ಸೇತುವೆ ಮೇ ಅಂತ್ಯದೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಹಾಗೂ ಗುತ್ತಿಗೆದಾರರಿಗೆ ಸೂಚನೆ ನೀಡಿದ್ದೇನೆ.

ಈ ಸೇತುವೆ ಪೂರ್ಣಗೊಂಡರೆ ಪ್ರಯಾಣಿಕರಿಗೆ ಯಾವುದೇ ತೊಂದರೆ ಆಗುವುದಿಲ್ಲ ಅದನ್ನು ಆದಷ್ಟು ಬೇಗ ಪೂರ್ಣಗೊಳಿಸಲು ಪ್ರಯತ್ನಿಸಲಾಗುವುದು ಈ ಎರಡು ಸೇತುವೆಗಳ ಜೊತೆಗೆ ಹಿರೂರದಿಂದ ಗುತ್ತಿಹಾಳ ಗ್ರಾಮಕ್ಕೆ ಸಂಪರ್ಕ ನೀಡುವ ಸುಮಾರು 30 ಕೋಟಿಗಿಂತಲೂ ಹೆಚ್ಚು ಮೊತ್ತದ ಇನ್ನೊಂದು ಸೇತುವೆ ಕಾಮಗಾರಿಗೆ ಶೀಘ್ರದಲ್ಲಿಯೇ ಚಾಲನೆ ನೀಡಲಿದ್ದೇನೆ ಈ ಸೇತುವೆ ನಿರ್ಮಾಣದಿಂದ ಈ ಭಾಗದ ಗ್ರಾಮೀಣ ಜನರಿಗೆ ತುಂಬಾ ಅನುಕೂಲವಾಗಲಿದೆ ಎಂದ ಅವರು ಮತಕ್ಷೇತ್ರದ ಸಮಗ್ರ ಅಭಿವೃದ್ಧಿಗಾಗಿ ಸಾಕಷ್ಟು ಅನುದಾನವನ್ನು ತಂದು ಕೆಲಸ ಮಾಡುತ್ತಿದ್ದೇನೆ ಇದರಲ್ಲಿ ಕ್ಷೇತ್ರದ ಜನರ ಸಾಕಷ್ಟು ಸಹಕಾರ ನನ್ನೊಂದಿಗೆ ಇದೆ ಮುಂದೆಯೂ ಆ ಸಹಕಾರ ಇದೇ ರೀತಿಯಾಗಿರಲಿ ಎಂದು ನಾನು ಕೇಳಿಕೊಳ್ಳುತ್ತೇನೆ ಎಂದರು.

ಈ ಸಮಯದಲ್ಲಿ ಮುಖಂಡರಾದ ಸಿದ್ದನಗೌಡ ಪಾಟೀಲ ನಾವದಗಿ,ಪ್ರಭುಗೌಡ ಮದರಕಲ್ಲ, ಸುರೇಶಧಣಿ ನಾಡಗೌಡ ಬಿಂಜಲಭಾವಿ, ಶರಣುಧಣಿ ದೇಶಮುಖ, ರಾಜುಗೌಡ ಮುದ್ದೇಬಿಹಾಳ, ಮಲ್ಲಿಕಾರ್ಜುನ ಪಟ್ಟಣಶೆಟ್ಟಿ, ಸಂಗನಗೌಡ ಅಸ್ಕಿ, ಆರಿಫ್ ಹೊನ್ನುಟಗಿ, ಫಯಾಜ್ ಉತ್ನಾಳ, ಆಸಿಫ್ ಕೆಂಭಾವಿ, ಎಇಇ ಎ.ಬಿ.ರೆಡ್ಡಿ, ಶರಣಪ್ಪ ಕುಂಬಾರ, ಶಿವಪುತ್ರಪ್ಪ ಬಿಳೇಭಾವಿ, ಅಭಿಯಂತರ ವೀರೇಶ ಕುಂಬಾರ,ಮಾಲೂಬಾ ಜಾಧವ ಮತ್ತಿತರರು ಇದ್ದರು.

## ಎಲ್ಲರ ಗಮನ ಸೆಳೆದ ವೇದಿಕೆ ಮೇಲೆ ಮೋದಿ ಮತ್ತು ದೇವೇಗೌಡರ ಮಾತುಕತೆ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕಿನಲ್ಲಿರುವ ಆದಿಚುಂಚನಗಿರಿಯ ಶ್ರೀಗುರು ಭೈರವೈಕ್ಯಮಂದಿರ ಉದ್ಘಾಟನೆಗೆ ಆಗಮಿಸಿದ ಪ್ರಧಾನಿ ನರೇಂದ್ರಮೋದಿ ಅವರು, ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ಜೊತೆ ನಡೆಸಿದ ಮಾತುಕತೆ ಎಲ್ಲರ ಗಮನಸೆಳೆಯಿತು.**




ಬೆಟ್ಟದ ತಪ್ಪಲಿನಲ್ಲಿರುವ ಭೈರವೈಕ್ಯ ಮಂದಿರವನ್ನು ಲೋಕಾರ್ಪಣೆಗೊಳಿಸಿ, ಬಿಜಿಎಸ್ ಕ್ರೀಡಾಂಗಣದಲ್ಲಿ ಹಮಿಕೊಂಡಿದ್ದ ಕಾರ್ಯಕ್ರಮದ ವೇದಿಕೆಗೆ ಆಗಮಿಸುತ್ತಿದ್ದಂತೆ ಕುರ್ಚಿಯಲ್ಲಿ ಆಸೀನರಾಗಿದ್ದ ದೇವೇಗೌಡರಿಗೆ ಮೋದಿಯವರು ಹಸ್ತಲಾಘವ ಮಾಡಿ, ಯೋಗಕ್ಷೇಮ ವಿಚಾರಿಸಿದರು. ಪರಸ್ಪರ ಇಬ್ಬರೂ ನಾಯಕರು ಉಭಯ ಕುಶಲೋಪರಿ ನಡೆಸಿದರು. ವೇದಿಕೆ ಮೇಲೆ ಮೋದಿ ಮತ್ತು ದೇವೇಗೌಡರ ನಡುವೆ ನಡೆದ ಈ ಸಂಭಾಷಣೆ ನೆರೆದಿದ್ದ ಎಲ್ಲರ ಗಮನವನ್ನು ಸೆಳೆಯಿತು ಹಾಗೂ ಕುತೂಹಲಕ್ಕೆ ಎಡೆ ಮಾಡಿಕೊಟ್ಟಿತು. ನಂತರ ಭಾಷಣ ಮಾಡುವ ಸಂದರ್ಭದಲ್ಲೂ ಮೋದಿಯವರು ದೇವೇಗೌಡರ ಕೈ ಹಿಡಿದುಕೊಂಡು ಕೆಲಹೊತ್ತು ಮಾತುಕತೆ ನಡೆಸಿದ್ದು ವಿಶೇಷವಾಗಿತ್ತು. ಇನ್ನು ಭಾಷಣದಲ್ಲೂ ದೇವೇಗೌಡರನ್ನು ಹಾಡಿಹೊಗಳಿದ ಮೋದಿ, ಇಡೀ ವಿಶ್ವಕ್ಕೆ ರಾಗಿ ಮುದ್ದೆಯನ್ನು ಪರಿಚಯಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ. ಹೀಗಾಗಿ ಯುವಕರು ಹೆಚ್ಚು ಹೆಚ್ಚು ರಾಗಿ ಮುದ್ದೆಯನ್ನು ಸೇವಿಸಲು ಕರೆಕೊಟ್ಟರು.

# ಲೋಯಲ ಸಮಾಜ ಸೇವಾ ಕೇಂದ್ರದಿಂದ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಣೆ



ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ಲೋಯಲ ಸಮಾಜ ಸೇವಾ ಕೇಂದ್ರದ ಅರುಪೆ ಸಭಾಂಗಣದಲ್ಲಿ ಲೋಯಲ ಸಮಾಜ ಸೇವಾ ಕೇಂದ್ರ ಹಾಗೂ ಮಾನವ ಹಕ್ಕುಗಳ ವೇದಿಕೆ ಮಾನವಿ ವತಿಯಿಂದ ನಡೆದ ಡಾ.ಬಿ.ಆರ್.ಅಂಬೇಡ್ಕರ್ ರವರ 135 ನೇ ಜಯಂತಿ ಉತ್ಸವ ಕಾರ್ಯಕ್ರಮವನ್ನು ಡಾ.ಬಿ.ಆರ್.ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪುಷ್ಪ ಸಲ್ಲಿಸುವ ಮೂಲಕ ಉದ್ಘಾಟಿಸಿ ಗ್ರೇಡ್–2 ತಹಶೀಲ್ದಾರ್ ಅಬ್ದುಲ್ ವಾಹಿದ್ ಮಾತನಾಡಿ ವೈವಿಧ್ಯಮಯವಾದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಹೊಂದಿರುವ ಸಂಸ್ಕೃತಿ, ಪರಂಪರೆ,**

ಭಾಷೆಯನ್ನು ಹೊಂದಿರುವ ವಿಶೀಷ್ಟವಾದ ಭಾರತದೇಶಕ್ಕೆ ವಿಶ್ವದಲ್ಲಿಯೇ ಶ್ರೇಷ್ಟವಾದ ಸಂವಿಧಾನವನ್ನು ನೀಡಿದು ಪ್ರತಿಯೊಬ್ಬ ಪಾಲಕರು ತಮ್ಮ ಮಕ್ಕಳಿಗೆ ಸಂವಿಧಾನದ ಕುರಿತು ತಿಳಿಸಿದಾಗ ಮಾತ್ರ ಶಾಂತಿಯುತವಾದ ಸೌಹಾರ್ಧಯುತವಾದ ದೇಶವನ್ನು ನಿರ್ಮಾಣ ಮಾಡುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು. ತಾ.ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಶಾಹಿರ್ ಭಾನು ನದಾಫ್ ವಿಶೇಷ ಉಪನ್ಯಾಸ ನೀಡಿ ಡಾ.ಬಿ.ಆರ್. ಅಂಬೇಡ್ಕರ್ ರವರು ಜ್ಞಾನವನ್ನು ಗಳಿಸುವ ಶಿಕ್ಷಣಕ್ಕೆ ಹೆಚ್ಚಿನ ಅದ್ಯತೆಯನ್ನು ನೀಡಿದರು.

ವಿಶೇಷವಾಗಿ ಮಹಿಳೆಯರು ಕೂಡ ಶಿಕ್ಷಣವಂತರಾಗಬೇಕು ಆಗಮಾತ್ರ ಮಹಿಳೆಯರು ಸ್ವವಲಂಬಿಗಳಾಗಿ ಸ್ವತಂತ್ರರಾಗಿ ಬದುಕುವುದಕ್ಕೆ ಹಾಗೂ ಸ್ತ್ರೀಯರಿಗೆ ಸಮಾನತೆ ದೊರೆಯುವುದಕ್ಕೆ ಸಾಧ್ಯವಾಗುತ್ತದೆ ಎಂದು ಪ್ರಬಲವಾಗಿ ನಂಬಿದರು ಅವರು ಸಂವಿಧಾನದ ಮೂಲಕ ದೇಶದ ಪ್ರತಿಯೊಬ್ಬ ಮಹಿಳೆಗೂ ಕೂಡ ಸಮಾನತೆ, ಸಮಾನ ಹಕ್ಕುಗಳು, ಸ್ತ್ರೀಯರಿಗೆ ಮುಕ್ತವಾದ ಸ್ವತಂತ್ರ ?ಯವನ್ನು ನೀಡಿದ್ದಾರೆ ಅದ್ದರಿಂದ ಪ್ರತಿಯೊಬ್ಬ ಪಾಲಕರು ಕೂಡ ತಮ್ಮ ಹೆಣ್ಣು ಮಕ್ಕಳಿಗೆ ಶಿಕ್ಷಣವನ್ನು ನೀಡುವುದಕ್ಕೆ ಹೆಚ್ಚಿನ ಅದ್ಯತೆಯನ್ನು ನೀಡಿ ಎಂದು ತಿಳಿಸಿದರು.

ಜನೋದಾಯ ರಂಗ ಚೈತನ್ಯ ಕಲಾ ತಂಡದಿಂದ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ರಾಮಾಬಾಯಿ ರವರ ಜೀವನ ಕುರಿತು ನಾಟಕ ಪ್ರದರ್ಶನ ನಡೆಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾನ್ವಿ ಸೇವಾ ಕ್ಷೇತ್ರದ ಮುಖ್ಯಸ್ಥರಾದ ಫಾ.ಸಿಪ್ರಿಯನ್ ಟೆಲ್ಲಿಸ್ ವಹಿಸಿದರು ಉಪತಹಾಸೀಲ್ದಾರ್ ವಿರುಪಣ್ಣ, ಲೋಯಾಲ ಕಾಲೇಜಿನ ಪ್ರಾಚಾರ್ಯರಾದ ಫಾ.ವಿನೋದ್ ಫೌಲ್, ನಿವೃತ್ತ ಶಿಕ್ಷಕಿ ಮಹಿಮೂದ್ ಬೇಗಂ, ಮಿಮುಕ್ತಿ ಚಾರಿಟಬಲ್ ಟ್ರಸ್ಟ್ನ ಫಾ.ಸತೀಶ್ ಫರ್ನಾಂಡಿಸ್, ಜನಶಕ್ತಿ ಒಕ್ಕೂಟದ ಅಧ್ಯಕ್ಷರಾದ ಗಂಗಮ್ಮ, ಜನೋದಯ ಸಂಸ್ಥೆಯ ಸಿಸ್ಟರ್ ಕ್ರಿಸ್ಟಿನ್, ರವೀಂದ್ರ ಜಾನೇಕಲ್, ಚಂದ್ರು, ಶಿವಜ್ಞಾನಿ, ಅಬ್ರಹಂ , ಸದಾನಂದ, ಮಾರೆಪ್ಪ ,ಬಸಪ್ಪ, ಬಸವಲಿಂಗಪ್ಪ,ತಿಮ್ಮಲಮ್ಮ, ಬಸವರಾಜ, ಸೇರಿದಂತೆ ಇನ್ನಿತರರು ಇದ್ದರು.

# ಜೇವರ್ಗಿಯಲ್ಲಿ ಅಂಬೇಡ್ಕರ್ ಜಯಂತೋತ್ಸವ ಸಮಿತಿ ಅಧ್ಯಕ್ಷರಿಗೆ ಸನ್ಮಾನ



ನೈಜ್ಯ ದೆಸೆ ನ್ಯೂಸ್

**ಜೇವರ್ಗಿ: ಜೇವರ್ಗಿ ಪ್ರವಾಸಿ ಮಂದಿರದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತೋತ್ಸವ ಅಂಗವಾಗಿ ತಾಲೂಕು ಸಮಿತಿ ಅಧ್ಯಕ್ಷರಾಗಿ ಆಯ್ಕೆಯಾದ ಪುಂಡಲಿಕ ಗಾಯಕವಾಡ ಅವರನ್ನು ಭರ್ಜರಿಯಾಗಿ ಸನ್ಮಾನಿಸಲಾಯಿತು.**

ಜೇವರ್ಗಿ ತಾಲೂಕಿನ ಎಲ್ಲಾ ಸಮಾಜಗಳ ಮುಖಂಡರು ಹಾಗೂ ವಿವಿಧ ಸಂಘಟನೆಗಳ ಪ್ರತಿನಿಧಿಗಳು ಒಂದಾಗಿ ಸೇರಿ ಪುಂಡಲಿಕ ಗಾಯಕವಾಡ ಅವರಿಗೆ ಗೌರವ ಸಲ್ಲಿಸಿದರು. ಅವರ ಆಯ್ಕೆಯಿಂದ ತಾಲೂಕಿನಲ್ಲಿ ಹರ್ಷದ ವಾತಾವರಣ ನಿರ್ಮಾಣವಾಗಿದೆ ಎಂದು ಮುಖಂಡರು ತಿಳಿಸಿದರು. ಪುಂಡಲಿಕ ಗಾಯಕವಾಡ ಅವರು ಹೋರಾಟಗಾರರಾಗಿ ಗುರುತಿಸಿಕೊಂಡಿದ್ದು, ಯಾವುದೇ ಸಮಾಜದ ಸಮಸ್ಯೆ ಎದುರಾದರೂ ತಮ್ಮ ಹೋರಾಟದ ಮೂಲಕ ನ್ಯಾಯ ಒದಗಿಸುವಲ್ಲಿ ಸದಾ ಮುಂಚೂಣಿಯಲ್ಲಿದ್ದಾರೆ. ಈ ಹಿನ್ನೆಲೆಯಲ್ಲಿ ಅವರು ಉತ್ತಮ ವ್ಯಕ್ತಿತ್ವದ ನಾಯಕರಾಗಿ ಗುರುತಿಸಿಕೊಂಡಿದ್ದಾರೆ ಎಂದು ಸಮಾಜದ ಮುಖಂಡರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಭಗವಂತರಾಯ ಶಿವಣ್ಣವರ್, ಭಗವಂತ್ರಾಯ ಬೆನ್ನೂರು, ಬಿ.ಎಸ್. ಮಾಲಿ ಪಾಟೀಲ್, ಮರೆಪ್ಪ ಬೆಗಾರ, ನಿಂಗಣ್ಣ ರದ್ದೇವಾಡಗಿ, ಗುರುಲಿಂಗಯ್ಯ ಸ್ವಾಮಿ, ಸಿದ್ದಣ್ಣ ಅವರಾದ, ಮೈಬೂಬ್ ನೂರಿ, ಸಾಹೇಬಗೌಡ ಕಡ್ಲಿ, ಸಿದ್ದಲಿಂಗ ಎಚ್. ಪೂಜಾರಿ, ಸಿದ್ದು ಸುಂತ್ಯಾಣ ಸೇರಿದಂತೆ ಅನೇಕ ಮುಖಂಡರು ಮತ್ತು ಪದಾಧಿಕಾರಿಗಳು ಉಪಸ್ಥಿತರಿದ್ದು ಸನ್ಮಾನಿಸಿ ಹರ್ಷ ವ್ಯಕ್ತಪಡಿಸಿದರು.

**ವರದಿ: ಸಿದ್ದಲಿಂಗ ಎಚ್. ಪೂಜಾರಿ**

# ಜನಸೇವೆಯಲ್ಲಿ ಬಿಡುವಿಲ್ಲದೇ ಶಾಸಕರ ಅನುಪಸ್ಥಿತಿಯಲ್ಲೂ ಕ್ಷೇತ್ರದ ಅಭಿವೃದ್ಧಿಗೆ 'ಸೂಡಾ' ಅಧ್ಯಕ್ಷರ ವೇಗ

## ಸಿಂಧನೂರು ಗ್ರಾಮೀಣಾಭಿವೃದ್ಧಿಗೆ ಹೊಸ ವೇಗ: ಒಂದೇ ದಿನ 7.5 ಕೋಟಿ ರೂ. ಮೊತ್ತದ ಕಾಮಗಾರಿಗಳಿಗೆ ಬಾಬುಗೌಡ ಬಾದರ್ಲಿ ಚಾಲನೆ

ನೈಜ್ಯ ದೆಸೆ ನ್ಯೂಸ್









**ಸಿಂಧನೂರು: ವಿಧಾನಸಭಾ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಯೇ ಶಾಸಕರ ಮೂಲಮಂತ್ರವಾಗಿದ್ದು, ಅದರಂತೆ ನಿನ್ನೆ ದಿನ ಕ್ಷೇತ್ರದ ನಾಲ್ಕು ಪ್ರಮುಖ ಭಾಗಗಳಲ್ಲಿ ರಸ್ತೆ ಮತ್ತು ಮೂಲಸೌಕರ್ಯ ಕ್ರಾಂತಿಗೆ ನಾಂದಿ ಹಾಡಲಾಯಿತು. ಮಾನ್ಯ ಶಾಸಕರಾದ ಶ್ರೀ ಹಂಪನಗೌಡ ಬಾದರ್ಲಿ ಅವರ ಮಾರ್ಗದರ್ಶನದಲ್ಲಿ, ಸಿಂಧನೂರು ನಗರಾಭಿವೃದ್ಧಿ ಪ್ರಾಧಿಕಾರದ (ಸೂಡಾ) ಅಧ್ಯಕ್ಷರಾದ ಶ್ರೀ ಬಾಬುಗೌಡ ಬಾದರ್ಲಿ ಅವರು ಸುಮಾರು 7.50 ಕೋಟಿ ರೂಪಾಯಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಿದರು.**

ಲೋಕೋಪಯೋಗಿ ಇಲಾಖೆಯ ಅನುದಾನದಡಿ ಅರಗಿನಮರ ಕ್ಯಾಂಪಿನಿಂದ ಆರ್. ಎಚ್. ನಂ1 ರವರೆಗೆ (3.80 ಕೋಟಿ) ಹಾಗೂ ಅಲ್ಲಿಂದ ಈರಣ್ಣ ಕ್ಯಾಂಪಿನವರೆಗೆ (?2.40 ಕೋಟಿ) ಡಾಂಬರೀಕರಣ ಕಾಮಗಾರಿ ಆರಂಭವಾಗಿದ್ದು, ಇದು ಈ ಭಾಗದ ಕೃಷಿಕರ ಹಾಗೂ ವ್ಯಾಪಾರಸ್ಥರ ದಶಕಗಳ ಕನಸನ್ನು ನನಸು ಮಾಡಲಿದೆ. ಬಾಲಯ್ಯ ಕ್ಯಾಂಪ್‌ನಲ್ಲಿ ?60 ಲಕ್ಷ ಹಾಗೂ ಹಾರಾಪುರ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದವರೆಗೆ ?25 ಲಕ್ಷ ವೆಚ್ಚದಲ್ಲಿ ಸಿಸಿ ರಸ್ತೆ ಮತ್ತು ಸುಸಜ್ಜಿತ ಚರಂಡಿ ನಿರ್ಮಾಣಕ್ಕೆ ಚಾಲನೆ ನೀಡುವ ಮೂಲಕ ಹಳ್ಳಿಗಳ ಮುಖಪುಟ ಬದಲಿಸಲು ಕ್ರಮ ಕೈಗೊಳ್ಳಲಾಗಿದೆ. ಕಲ್ಲೂರು ಗ್ರಾಮದಲ್ಲಿ 45 ಲಕ್ಷ ವೆಚ್ಚದ ಸಿಸಿ ರಸ್ತೆ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸೂಡಾ ಅಧ್ಯಕ್ಷ ಬಾಬುಗೌಡ ಬಾದರ್ಲಿ, "ಗ್ರಾಮೀಣ ಭಾಗದ ರಸ್ತೆಗಳು ಕೇವಲ ದಾರಿಗಳಲ್ಲ, ಅವು ಜನರ ಆರ್ಥಿಕ ಶಕ್ತಿಯ ಮೂಲಗಳು. ಶಾಸಕರ ಅನುಪಸ್ಥಿತಿಯಲ್ಲೂ ಅಭಿವೃದ್ಧಿ ಕೆಲಸಗಳು ಕುಂಠಿತವಾಗದಂತೆ ನಾವು ಜನಸೇವೆಯಲ್ಲಿ ತೊಡಗಿದ್ದೇವೆ. ಗುಣಮಟ್ಟದ ಕಾಮಗಾರಿಗೆ ಮೊದಲ ಆದ್ಯತೆ ನೀಡಲಾಗುವುದು," ಎಂದು ಭರವಸೆ ನೀಡಿದರು. ಭೂಮಿ ಪೂಜೆ ನೆರವೇರಿಸಿದ ನಂತರ ಮಾತನಾಡಿದ ಶ್ರೀ ಬಾಬುಗೌಡ ಬಾದರ್ಲಿ ಅವರು, "ಕೇವಲ ರಸ್ತೆ ನಿರ್ಮಾಣ ಮಾಡುವುದು ನಮ್ಮ ಉದ್ದೇಶವಲ್ಲ, ಬದಲಾಗಿ ಅವು ದೀರ್ಘಕಾಲ ಬಾಳಿಕೆ ಬರುವಂತೆ ಗುಣಮಟ್ಟವನ್ನು ಕಾಯ್ದುಕೊಳ್ಳುವುದು ನಮ್ಮ ಜವಾಬ್ದಾರಿ. ಈ ನಿಟ್ಟಿನಲ್ಲಿ ಲೋಕೋಪಯೋಗಿ ಇಲಾಖೆಯ ಎಂಜಿನಿಯರ್‌ಗಳಿಗೆ ಸೂಕ್ತ ನಿರ್ದೇಶನ ನೀಡಲಾಗಿದ್ದು, ಕಾಮಗಾರಿ ನಡೆಯುವಾಗ ಗ್ರಾಮಸ್ಥರು ಸಹ ನಿಗಾ ವಹಿಸಬೇಕು," ಎಂದು ಕರೆ ನೀಡಿದರು. "ಅರಗಿನಮರ ಕ್ಯಾಂಪ್ ಮತ್ತು ಈರಣ್ಣ ಕ್ಯಾಂಪ್ ಭಾಗದ ರಸ್ತೆಗಳು ಹದಗೆಟ್ಟಿದ್ದರಿಂದ ರೈತರು ತಮ್ಮ ಬೆಳೆಗಳನ್ನು ಮಾರುಕಟ್ಟೆಗೆ ಸಾಗಿಸಲು ಹರಸಾಹಸ ಪಡುತ್ತಿದ್ದರು.

ಈಗ ರೂ. 6.20 ಕೋಟಿ ವೆಚ್ಚದ ಡಾಂಬರೀಕರಣದಿಂದ ಈ ಭಾಗದ ಕೃಷಿ ಆರ್ಥಿಕತೆಗೆ ದೊಡ್ಡ ಮಟ್ಟದ ಬಲ ಸಿಗಲಿದೆ. ಹೊಲಗದ್ದೆಗಳಿಗೆ ಹೋಗುವ ರೈತರಿಗೆ ಮತ್ತು ಶಾಲಾ ಮಕ್ಕಳಿಗೆ ಇದು ವರದಾನವಾಗಲಿದೆ," ಎಂದು ಅವರು ಆಶಯ ವ್ಯಕ್ತಪಡಿಸಿದರು. ಬಾಲಯ್ಯ ಕ್ಯಾಂಪ್ ಮತ್ತು ಹಾರಾಪುರ ಗ್ರಾಮಗಳಲ್ಲಿ ಸಿಸಿ ರಸ್ತೆ ಹಾಗೂ ಚರಂಡಿ ನಿರ್ಮಾಣದ ಬೇಡಿಕೆ ಹಲವು ವರ್ಷಗಳಿಂದ ಇತ್ತು. ಇಂದು ಕಾಮಗಾರಿ ಆರಂಭವಾಗುತ್ತಿದ್ದಂತೆ ಗ್ರಾಮಸ್ಥರು ಪಟಾಕಿ ಸಿಡಿಸಿ, ಪರಸ್ಪರ ಸಿಹಿ ಹಂಚುವ ಮೂಲಕ ಸಂಭ್ರಮಿಸಿದರು. ಶಾಸಕ ಹಂಪನಗೌಡ ಬಾದರ್ಲಿ ಅವರ ಅಭಿವೃದ್ಧಿ ಪರ ಕಾಳಜಿಗೆ ಜನರು ಕೃತಜ್ಞತೆ ಸಲ್ಲಿಸಿದರು.

ಕ್ಷೇತ್ರದ ಪ್ರತಿಯೊಂದು ಕ್ಯಾಂಪ್‌ಗಳನ್ನು ಮುಖ್ಯ ರಸ್ತೆಗೆ ಸಂಪರ್ಕಿಸುವ ಬೃಹತ್ ಯೋಜನೆಯನ್ನು ಶಾಸಕರು ರೂಪಿಸಿದ್ದಾರೆ. ಮುಂದಿನ ದಿನಗಳಲ್ಲಿ ಹಂತ–ಹಂತವಾಗಿ ಉಳಿದ ಗ್ರಾಮಗಳಿಗೂ ಅನುದಾನ ಬಿಡುಗಡೆ ಮಾಡಿಸಿ, ಸಿಂಧನೂರನ್ನು ಮಾದರಿ ವಿಧಾನಸಭಾ ಕ್ಷೇತ್ರವನ್ನಾಗಿ ಮಾಡಲಾಗುವುದು ಎಂದು ಮುಖಂಡರಾದ ಶಿವನಗೌಡ ಎಲೆಕುಡ್ಲುಗಿ ಮತ್ತು ಆನಂದ್ ಪಾಟೀಲ್ ಬೊಮ್ಮನಾಳ್ , ಶರಣೇಗೌಡ ತುಗ್ಗಲದಿನ್ನಿ ಇದೇ ಸಂದರ್ಭದಲ್ಲಿ ತಿಳಿಸಿದರು. ಕಾರ್ಯಕ್ರಮದಲ್ಲಿ ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯರಾದ ಶಿವನಗೌಡ ಎಲೆಕುಡ್ಲುಗಿ, ಪ್ರಮುಖ ಮುಖಂಡರಾದ ಆನಂದ್ ಪಾಟೀಲ್ ಬೊಮ್ಮನಾಳ್, ಶರಣೇಗೌಡ ತುಗ್ಗಲದಿನ್ನಿ ಸೇರಿದಂತೆ ಕ್ಷೇತ್ರದ ಹಿರಿಯ ಮುಖಂಡರು, ಇಲಾಖೆಯ ಅಧಿಕಾರಿಗಳು ಮತ್ತು ಅಪಾರ ಸಂಖ್ಯೆಯ ಗ್ರಾಮಸ್ಥರು ಭಾಗವಹಿಸಿ ಅಭಿವೃದ್ಧಿ ಕಾರ್ಯಗಳಿಗೆ ಸಾಕ್ಷಿಯಾದರು. ಸಾರ್ವಜನಿಕರ ದೀರ್ಘಕಾಲದ ಬೇಡಿಕೆಗಳು ಈಡೇರುತ್ತಿರುವುದಕ್ಕೆ ಗ್ರಾಮಸ್ಥರು ಈ ಸಂದರ್ಭದಲ್ಲಿ ಹರ್ಷ ವ್ಯಕ್ತಪಡಿಸಿ, ಹೂಗುಚ್ಛ ನೀಡಿ ಅಭಿನಂದಿಸಿದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101 KARNATAKA, EDITOR BY: IRFAN K PH NO.